ವಿಜಯಪುರ | ಸಂಪುಟ 01 | ಸಂಚಿಕೆ 291 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಭಾನುವಾರ, ಜನವರಿ 14, 2024

“ನಾನು ಹಿಂದೂ ವಿರೋಧಿಯಲ್ಲ, ಜ.22ರಂದು ಅಯೋಧ್ಯೆಯಲ್ಲಿ ನಡೆಯಲಿರುವ ಬಿಜೆಪಿ ನಾಟಕ ಮಂಡಳಿಯ ಪ್ರದರ್ಶನ ಮುಗಿದ ನಂತರ ಅಯೋಧ್ಯೆಗೆ ಹೋಗಿ ರಾಮ ಮಂದಿರಕ್ಕೆ ಭೇಟಿ ನೀಡಿ ಬರಬೇಕೆಂದು ತೀರ್ಮಾನ ಮಾಡಿದ್ದೇನೆ.”




– ಸಿದ್ದರಾಮಯ್ಯ
ಮುಖ್ಯಮಂತ್ರಿಗಳು

# ಕೊನೆ ಉಸಿರಿರೋವರೆಗೂ ಕಾವೇರಿ ನೀರಿಗಾಗಿ ಹೋರಾಟ!

## ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಶಪಥ

**ಬೆಂಗಳೂರು:** ಕರ್ನಾಟಕಕ್ಕೆ ಅನ್ಯಾಯವಾಗಿದ್ದು, ಮತ್ತೆ ಪ್ರಧಾನಿಯಾಗಲಿರುವ ನರೇಂದ್ರ ಮೋದಿಯಿಂದ ಮಾತ್ರ ಕಾವೇರಿ ನೀರಿನ ಸಮಸ್ಯೆ ಬಗೆಹರಿಸಲು ಸಾಧ್ಯ ಎಂದು ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡ ಶನಿವಾರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನ ಜೆಡಿಎಸ್ ಪಕ್ಷದ ಕೇಂದ್ರ ಕಚೇರಿಯಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜೆಡಿಎಸ್ ವರಿಷ್ಠ ದೇವೇಗೌಡರು, ತಮ್ಮ ಕೊನೆಯ ಉಸಿರು ಇರುವವರೆಗೂ ಕಾವೇರಿ ನೀರಿಗಾಗಿ ಹೋರಾಟ ಮಾಡುವುದಾಗಿ ಪ್ರತಿಜ್ಞೆ ಮಾಡಿದರು.

ಕರ್ನಾಟಕ ಎದುರಿಸುತ್ತಿರುವ ಕಾವೇರಿ ನೀರಿನ ಸಮಸ್ಯೆ ಬಗೆಹರಿಸುವ ಶಕ್ತಿ ಮೋದಿಗೆ ಮಾತ್ರ ಇದೆ ಎಂದರು.

ಕಾವೇರಿ ನೀರು ಬಿಡುವಂತೆ ಪ್ರತಿ ವರ್ಷ ತಮಿಳುನಾಡು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸುತ್ತದೆ. ನಮಗೆ ನೀರಿಲ್ಲದಿದ್ದರೂ,ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀರು ಕೊಡಿ ಎಂದು ಹೇಳುತ್ತಾರೆ, ನಮ್ಮ ಅಧಿಕಾರಿಗಳು ಎಷ್ಟೇ ವಾದಿಸಿದರೂ ಪ್ರಯೋಜನವಾಗಿಲ್ಲ. ಕಾವೇರಿ ಜಲಾಶಯಗಳಲ್ಲಿ ಎಷ್ಟು ನೀರಿದೆ ಎಂಬುದನ್ನು ನೋಡಲು ಸಿಡಬ್ಲ್ಯು-ಎಂಎ ಕರ್ನಾಟಕಕ್ಕೆ ಭೇಟಿ ನೀಡಿಲ್ಲ. ಮತ್ತೆ ಪ್ರಧಾನಿಯಾಗಲಿರುವ ನರೇಂದ್ರ ಮೋದಿ ಅವರಿಂದ ಮಾತ್ರ ಕಾವೇರಿ ಸಮಸ್ಯೆ ಬಗೆಹರಿಸಲು ಸಾಧ್ಯ ಎಂದು ಹೇಳಿದರು.



“ಕಾವೇರಿ ಸಮಸ್ಯೆಗೆ ಪರಿಹಾರವಿದೆ, ನಮಗೆ ಆಗಿರುವ ಅನ್ಯಾಯದ ಬಗ್ಗೆ ಪ್ರಧಾನಿ ಮೋದಿಯವರಿಗೆ ಅರಿವು ಮೂಡಿಸಲು ನಾವು ಒಟ್ಟಾಗಿ ಹೋರಾಡಬೇಕು. ಇದರಲ್ಲಿ ಯಾವುದೇ ರಾಜಕೀಯ ಬೇಡ, ಈ ಕಾರಣಕ್ಕಾಗಿ ರಾಜಕೀಯ ಪಕ್ಷಗಳು ಒಟ್ಟಾಗಿ ಹೋರಾಡಬೇಕು” ಎಂದು ಎಲ್ಲಾ ರಾಜಕೀಯ ಪಕ್ಷಗಳಿಗೆ ಮನವಿ ಮಾಡಿದರು.

ಇನ್ನೂ ಎರಡೂವರೆ ವರ್ಷ ರಾಜ್ಯಸಭೆಯಲ್ಲಿ ಇರುತ್ತೇನೆ. ಕೊನೆಯ ಉಸಿರು ಇರುವವರೆಗೂ ಕಾವೇರಿ ವಿಚಾರವಾಗಿ ಹೋರಾಟ ಮಾಡುತ್ತೇನೆ, ರಾಜ್ಯದ ಜನತೆಗೆ ನ್ಯಾಯ ಸಿಗುವವರೆಗೂ ಸುಮ್ಮನಿರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಫೆಬ್ರವರಿ 1 ರಂದು ರಾಜ್ಯಸಭೆಯ ಅಧಿವೇಶನದಲ್ಲಿ ಪಾಲ್ಗೊಳ್ಳಲು ದೆಹಲಿಗೆ ಹೋಗಲಿದ್ದು, ಸಂಸತ್ತಿನಲ್ಲಿ ಕಾವೇರಿ ವಿಷಯವನ್ನು ಪ್ರಸ್ತಾಪಿಸಲಾಗುವುದು, ಕಾವೇರಿ ವಿಚಾರದಲ್ಲಿ ಮಧ್ಯಸ್ಥಿಕೆ ವಹಿಸುವಂತೆ ಪ್ರಧಾನಿ ಮೋದಿಯವರಿಗೆ ಮನವಿ ಮಾಡುತ್ತೇನೆ ಎಂದು ಗೌಡರು ಹೇಳಿದರು.

# ಸಿಂದಗಿ ಜಿಲ್ಲೆಯಾಗಿಸಲು ಅರ್ಬನ್ ಬ್ಯಾಂಕ್ ಮಂಡಳಿ ಮನವಿ

ಉದಯರಶ್ಮಿ ನ್ಯೂಸ್

ಸಿಂದಗಿ: ತಾಲೂಕು ಜಿಲ್ಲೆಯಾಗುವ ಎಲ್ಲ ಅರ್ಹತೆಗಳನ್ನು ಒಳಗೊಂಡಿದೆ. ಒಂದು ವೇಳೆ ಜಿಲ್ಲೆ ವಿಭಜನೆಯಾದಲ್ಲಿ ಸಿಂದಗಿಯನ್ನೆ ಜಿಲ್ಲೆಯನ್ನಾಗಿ ಮಾಡಬೇಕು ಎಂದು ಸಿಂದಗಿ ಪಟ್ಟಣ ಅರ್ಬನ್ ಬ್ಯಾಂಕ್‌ನ ಆಡಳಿತ



ಮಂಡಳಿಯ ಸದಸ್ಯರು ಹಾಗೂ ಸಿಬ್ಬಂದಿ ರಾಜ್ಯದ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರಿಗೆ ತಹಶೀಲ್ದಾರ ಮೂಲಕ ಶನಿವಾರ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬ್ಯಾಂಕಿನ ನಿರ್ದೇಶಕ ಶರಣಪ್ಪ ವಾರದ ಮಾತನಾಡಿ, ಸಿಂದಗಿ ತಾಲೂಕು 3 ತಾಲೂಕುಗಳಾಗಿ ವಿಭಜನೆಯಾಗಿದೆ. ಜಿಲ್ಲೆಯಲ್ಲಿಯೇ ಅತಿ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ಹಾಗೂ ವಿಸ್ತೀರ್ಣದಲ್ಲಿ ದೊಡ್ಡದಾಗಿರುವ ಕೇಂದ್ರವಾಗಿದೆ. ಕಂದಾಯ ಇಲಾಖೆಯಲ್ಲಿ ಹೆಚ್ಚಿನ ಆದಾಯ ಸಿಂದಗಿ ತಾಲೂಕಿನಿಂದ ಸಂಗ್ರಹವಾಗುತ್ತದೆ. ರಾಷ್ಟ್ರೀಯ ಹೆದ್ದಾರಿ-50 ಸಿಂದಗಿ ನಗರದಿಂದೊಂದಿಗೆ ಸಂಪರ್ಕ ಬೆಸೆದಿದೆ. ಪೂರ್ವದಲ್ಲಿ ಕಲಬುರಗಿ, ಪಶ್ಚಿಮದಲ್ಲಿ ವಿಜಯಪೂರದಲ್ಲಿ ವಿಮಾನ ನಿಲ್ದಾಣಗಳಿದ್ದು, ರಾಜ್ಯದ ರಾಜಧಾನಿ ಸಂಪರ್ಕಿಸಲು ಅನುಕೂಲವಾಗುತ್ತದೆ. ಈಗಾಗಲೇ ಸಿಂದಗಿಯಲ್ಲಿ 2 ಕ್ರೀಮಿನಲ್ ಮತ್ತು 4 ಸಿವಿಲ್ ಕೋರ್ಟಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ ಮಿನಿ ವಿಧಾನಸೌಧ ನಿರ್ಮಾಣದ ಹಂತದಲ್ಲಿದೆ. ಉತ್ತಮ ಕೈಗಾರೀಕರಣ ವಲಯವಾಗಿ ಪರಿವರ್ತಿಸಲು ಕೇಂದ್ರ ಸ್ಥಾನದಲ್ಲಿದೆ. ಭೌಗೋಳಿಕ ವಯಲದಲ್ಲಿ ವ್ಯಾಪಕವಾಗಿದ್ದು ಸಾಂಸ್ಕೃತಿಕ ಕ್ಷೇತ್ರದಲ್ಲಿ ಸಿಂದಗಿ ತಾಲೂಕು ಜಿಲ್ಲೆಯಲ್ಲಿಯೇ ಅಗ್ರವಾಗಿದೆ. ಹೀಗೆ ಎಲ್ಲ ಅನುಕೂಲಗಳು ಇರುವ ಸಿಂದಗಿಯನ್ನು ಜಿಲ್ಲೆ ಮಾಡುವಲ್ಲಿ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದರು.

ಈ ವೇಳೆ ಬ್ಯಾಂಕಿನ ಅಧ್ಯಕ್ಷ ಷಣ್ಮುಖಪ್ಪ ಸಂಗಮ, ಉಪಾಧ್ಯಕ್ಷ ಪ್ರಕಾಶ ಕೋರಿ, ನಿರ್ದೇಶಕರಾದ ಸುರೇಶಬಾಬು ಜೋಗೂರ, ಎಮ್.ಸಿ.ಪಟ್ಟಣಶೆಟ್ಟಿ, ರವಿ ನಾಗೂರ, ನೀಲಕಂಠ ಗುಣಾರಿ, ವ್ಯವಸ್ಥಾಪಕ ಮುರಗೇಶ ಬಮ್ಮಣ್ಣಿ, ಬಸವರಾಜ ದೇವೂರ, ಉಮೇಶ ಮತ್ತೂರ, ಶರಣಬಸಪ್ಪ ಅಡಗಲ್ಲ, ಸಲೀಂ ಬಳಗಾನೂರ, ಸುನೀಲ ಘಟೋಳೆ, ಶೈಲಾ ಪಟ್ಟಣಶೆಟ್ಟಿ, ವೀರೇಂದ್ರ ಕುಮಟಗಿ, ಅನುಪಮಾ ಕತ್ತಿ, ಅನೀಲ ನಾಕಮನ, ಶಾಂತೇಶ ಪೂಜಾರಿ, ಕಿರಣ ಮೇಲಿನಮನಿ, ದಾನಪ್ಪ ಬಂದೆ ಸೇರಿದಂತೆ ಬ್ಯಾಂಕಿನ ಸಿಬ್ಬಂದಿ ಇದ್ದರು.

### ರಾಜ ನುಡಿ

ಇಂದು ನಾವು ಹೇಗಿದ್ದೇವೆ, ಏನಾಗಿದ್ದೇವೆ ಎಂಬುದು ನಾವು ಯುವಕರಾಗಿದ್ದಾಗ ಹೇಗಿದ್ದೆವು, ಏನು ಮಾಡಿದ್ದೆವು ಎಂಬುದನ್ನು ಆಧರಿಸಿದೆ. ತಾರುಣ್ಯವೆಂಬುದು ಭವಿಷ್ಯ ಬರುವ ಮುಂಚೆಯೇ ಭವಿಷ್ಯವನ್ನು ಬದಲಾಯಿಸಲು ಇರುವ ಜೀವಮಾನದ ಏಕ ಮಾತ್ರ ಅವಕಾಶ. ಈ ಕಾರಣ ವಿವೇಕಾನಂದರು ‘ಏಳಿ ಎದ್ದೇಳಿ’ಎಂದು ಕರೆ ಕೊಟ್ಟದ್ದು.

ರಾಷ್ಟ್ರೀಯ ಯುವ ದಿನದ ಶುಭಾಶಯಗಳು

-ಡಾ. ರಾಜಶೇಖರ ನಾಗೂರ

# ಸರ್ಕಾರಿ ಕೆಲಸಗಳನ್ನು ಮಾಡಿಕೊಡುವದಾಗಿ ವಂಚಿಸುತ್ತಿರುವ ಬಗ್ಗೆ ದೂರು: ತಹಶೀಲದ್ದಾರ್ ಕಟ್ಟಿಮನಿ

## ಅಂಗಡಿಗಳನ್ನು ತೆರವುಗೊಳಿಸದಂತೆ ವ್ಯಾಪಾರಸ್ಥರ ಮನವಿ




ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಪಟ್ಟಣದ ತಹಶೀಲ್ದಾರ ಕಾರ್ಯಾಲಯದ ಆವರಣದಲ್ಲಿ ಡಬ್ಬಾ ಅಂಗಡಿಗಳನ್ನಿಟ್ಟುಕೊಂಡ ವ್ಯಾಪಾರಸ್ಥರು ತಮ್ಮ ಅಂಗಡಿಗಳನ್ನು ತೆರವುಗೊಳಿಸದಂತೆ ಜಿಲ್ಲಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ಅಂಗಡಿಕಾರರಲ್ಲಿ ಬಹುತೇಕರು ದೈಹಿಕ ಸಾಮರ್ಥ್ಯದಿಂದ ದುಡಿಯಲು ಆಗದ ಅಂಗವಿಕಲರು, ವಿಧವೆಯರು, ಹಿಂದುಳಿದ ವರ್ಗದವರು ಇದ್ದು ಸಾಲ ಸೋಲ ಮಾಡಿಕೊಂಡಿದ್ದೇವೆ. ನಮ್ಮ ಅಂಗಡಿಗಳನ್ನು ತೆರವುಗೊಳಿಸದೇ ಇನ್ನೂ ಕೆಲವು ದಿನಗಳ ಕಾಲ ಅವಕಾಶ ನೀಡಬೇಕು ಎಂದು ಮನವಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಬಿ.ವಿ.ಪಾಟೀಲ, ಕೆ.ಪಿ.ಲಮಾಣಿ, ಜೆ.ಎನ್.ನದಾಫ್, ಎಸ್. ಎಸ್.ಸಜ್ಜನ, ಎಸ್.ಎಲ್.ನಾಯ್ಕೋಡಿ, ಆರ್.ಪಿ.ಲಮಾಣಿ, ಆನಂದ ಬಿ.ಎಚ್, ಎಲ್.ಪಿ.ಲಮಾಣಿ, ಸಿ.ಎಸ್.ಬಿರಾದಾರ ಸೇರಿದಂತೆ ಮತ್ತೀತರರು ಸಹಿ ಮಾಡಿದ್ದಾರೆ.

ಈ ಅಂಗಡಿಗಳ ಪೈಕಿ ಹಲವರು ಎರಡು, ಮೂರು ಅಂಗಡಿಗಳನ್ನಿಟ್ಟು ಬಾಡಿಗೆ ಪಡೆಯುತ್ತಿರುವ ಮತ್ತು ಕೆಲವು ಝರಾಕ್ಸ್, ಕಂಪ್ಯೂಟರ್ ಅಂಗಡಿಯವರು ಮುಗ್ಧ ಸಾರ್ವಜನಿಕರ ಬಳಿ ಹೆಚ್ಚಿನ ಹಣ ಪಡೆದು ಸರ್ಕಾರಿ ಕೆಲಸಗಳನ್ನು ಮಾಡಿಕೊಡುವದಾಗಿ ವಂಚಿಸುತ್ತಿರುವ ಬಗ್ಗೆ ದೂರುಗಳು ಬಂದಿರುವ ಹಿನ್ನೆಲೆ ಈ ಅಂಗಡಿಗಳನ್ನು ತೆರವುಗೊಳಿಸಲು ಮುಂದಾಗಿರುವ ಬಗ್ಗೆ ತಹಶೀಲ್ದಾರ ಬಲರಾಮ ಕಟ್ಟಿಮನಿ ಸ್ಪಷ್ಟಪಡಿಸಿದ್ದಾರೆ.



### ವಚನ ಚಿಂತನ 277

*ಕಣ್ಣೊಳಗಿನ ಕಣ್ಣು-ನೇತ್ರ-ಸೂತ್ರ-ಲಿಂಗ-ಗುಹ್ಯ-ಗೋಪ್ಯ-ರಹಸ್ಯ*

*ಕಣ್ಣಿಂಗೆ ಕಣ್ಣು, ಕಣ್ಣೊಳು ಕಣ್ಣು,*
*ಕಣ್ಣೇ ನೇತ್ರ ನೇತ್ರವೆ ಸೂತ್ರ*
*ಸೂತ್ರವೆ ಲಿಂಗ, ಲಿಂಗವೆ ಗುಹ್ಯ.*
*ಗುಹ್ಯಕ್ಕೆ ಗುಹ್ಯ, ಗೋಪ್ಯಕ್ಕೆ ಗೋಪ್ಯ,*
*ರಹಸ್ಯಕ್ಕೆ ರಹಸ್ಯ. ಈ ನೇತ್ರಮಹಿಮೆಯ*
*ಗುಹೇಶ್ವರ ಬಲ್ಲನಲ್ಲದೆ ಕಣ್ಣುಗೆಟ್ಟಣ್ಣಗಳೆತ್ತ*
*ಬಲ್ಲರು ನೋಡಯ್ಯ.*

*– ಅಲ್ಲಮಪ್ರಭುಗಳು*

ಕಣ್ಣೊಳಗಿನ ಕಣ್ಣು-ನೇತ್ರ-ಸೂತ್ರ-ಲಿಂಗ-ಗುಹ್ಯ-ಗೋಪ್ಯ-ರಹಸ್ಯ ಇಲ್ಲಿ ಬಳಸಿರುವ ಪ್ರತಿ ಪದವು ಲಿಂಗಾಂಗದ ಅನುಸಂಧಾನದಲ್ಲಿ ಸಾಧಕನು ಅನುಭವಿಸುವ ಅನುಭಾವದ ನೆಲೆಯನ್ನು ಪ್ರತಿನಿಧಿಸುತ್ತವೆ. ಇಷ್ಟಲಿಂಗವನ್ನು ಅನಿಮಿಷ ದೃಷ್ಟಿಯಿಂದ ನೋಡುವಾಗ ಅಂಗದ ಭಾಹ್ಯಕಣ್ಣಿನ ಮೂಲಕ ಹೊರಡುವ ಕಿರಣಗಳು ಇಷ್ಟಲಿಂಗವನ್ನು ತಾಕಿ ಮರಳಿ ಪ್ರತಿಫಲಿಸಿ ಅಂಗದೊಳಗೆ ಕಣ್ಣಿನ ಮೂಲಕ ಪ್ರವೇಶಿಸಿದಾಗ ಅಂತರಂಗದ ನೇತ್ರ ಜಾಗೃತಗೊಳ್ಳುತ್ತದೆ, ಆಗ ಮೆದುಳಿನ ಪೀನೀಯಲ್ ಗ್ಲ್ಯಾಂಡದಿಂದ ಮೆಲಾಟನಿನ್ ದ್ರವವು ಸ್ರವಿಸುವಿಕೆಯನ್ನು ಗುಹ್ಯ-ಗೋಪ್ಯವೆಂದಿದ್ದಾರೆ, ಮುಂದುವರೆದು ಇಷ್ಟಲಿಂಗದಿಂದ ಅಂಗಭಾವ ಅಳಿದು ಲಿಂಗಭಾವ ಒಡಮೂಡುವ ಈ ಪ್ರಕ್ರೀಯೆಯು ಎಲ್ಲರಿಗೂ ಸಾದ್ಯವಿಲ್ಲದ ಕಾರಣ ಇದೊಂದು ರಹಸ್ಯ ಸಂಗತಿ. ಕಾರಣ ಸಾಧಕನು ಸಾಧಿಸಬೇಕಾದ ಮಾರ್ಗವನ್ನು ಇಲ್ಲಿ ಅಲ್ಲಮಪ್ರಭುಗಳು ತಿಳಿಸುತ್ತ ಅಂತರಂಗದಕಣ್ಣು ತೆರೆಯದವರಿಗೆ ಇದು ಸಾದ್ಯವಿಲ್ಲವೆಂದಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ವಿಜಯಪುರದಲ್ಲಿ ನಡೆಯುತ್ತಿರುವ ಫಲ-ಪುಷ್ಪ ಪ್ರದರ್ಶನ ಹಾಗೂ ತೋಟಗಾರಿಕೆ ಅಭಿಯಾನ

# ಫಲ-ಪುಷ್ಪ ಪ್ರದರ್ಶನಕ್ಕೆ ಮೇಯರ್ ಮಹೇಜಬಿನ ಚಾಲನೆ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ತೋಟಗಾರಿಕೆ ಇಲಾಖೆ, ವಿಜಯಪುರ ಜಿಲ್ಲಾ ತೋಟಗಾರಿಕೆ ಸಂಘ (ರಿ), ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ, ಇಂಡಿ ಹಾಗೂ ಜಿಲ್ಲಾ ಹಾಪ್ ಕಾಮ್ಸ್ ವಿಜಯಪುರ ಇವರ ಸಹಯೋದಲ್ಲಿ, ಜಿಲ್ಲಾ ತೋಟಗಾರಿಕೆ ಕಚೇರಿ ಆವರಣದ ಬಸವ ವನದಲ್ಲಿ 2023-24ನೇ ಸಾಲಿನ ಫಲ-ಪುಷ್ಪ ಪ್ರದರ್ಶನ ಹಾಗೂ ತೋಟಗಾರಿಕೆ ಅಭಿಯಾನಕ್ಕೆ ವಿಜಯಪುರದ ಮಹಾನಗರ ಪಾಲಿಕೆಯ ಮಹಾಪೌರರಾದ ಶ್ರೀಮತಿ ಮಹೇಜಬಿನ ಅಬ್ದುಲ್‌ರಜಾಕ ಹೊರ್ತಿ ಅವರು ಚಾಲನೆ ನೀಡಿದರು.

ಫಲಪುಷ್ಪ ಪ್ರದರ್ಶನವು ಜನವರಿ 13 ರಿಂದ 15ರವರೆಗೆ ನಡೆಯಲಿದ್ದು, ಈ ಅವಧಿಯಲ್ಲಿ ಬೆಳಿಗ್ಗೆ 10 ರಿಂದ ರಾತ್ರಿ 8 ಗಂಟೆಯವರೆಗೆ ಸಾರ್ವಜನಿಕರ ವೀಕ್ಷಣೆಗೆ ಅವಕಾಶವಿದೆ.

**ಗಮನ ಸೆಳೆದ ಸಿರಿಧಾನ್ಯ ಹಾಗೂ ಹೂವಿನ ಮಾದರಿಗಳು:**

ಸಂಪೂರ್ಣವಾಗಿ ದ್ರಾಕ್ಷಿಯಿಂದ ತಯಾರಿಸಿದ ಮಂಟಪ, ಹಲವು ಬಗೆಯ ಹೂಗಳಿಂದ ರಚಿಸಿದ ಚಂದ್ರಯಾನ-3ರ ಯಶೋಗಾಥೆ ಸಾರುವ ಇಸ್ರೋ ರಾಕೆಟ್ ಹಾಗೂ 30 ವಿವಿಧ ಬಗೆಯ ಸಾಂಬಾರು ಪದಾರ್ಥಗಳಿಂದ ಸಿದ್ಧಪಡಿಸಿದ ಗಣಪತಿ, ಸಂಪೂರ್ಣವಾಗಿ ಸಿರಿ ಧಾನ್ಯಗಳಿಂದ ತಯಾರಿಸಿರುವ ಶ್ರೀ ಸಿದ್ದೇಶ್ವರ ಸ್ವಾಮೀಜಿ ಹಾಗೂ ಬಸವೇಶ್ವರ ಮೂರ್ತಿ ಕಲಾಕೃತಿ, ನಿಂಬೆಹಣ್ಣುಗಳಿಂದಲೇ ಬಳಸಿ ರಚಿಸಿರುವ ನಿಂಬೆ ಮನೆ, ವಿವಿಧ ಬಗೆಯ ಹೂಗಳನ್ನು ಉಪಯೋಗಿಸಿಕೊಂಡು ಮಾಡಿರುವ ಹರಿಯುವ ನೀರಿನ ಜಲಧಾರೆ, ಮನೆ, ಮೀನುಗಳು, ಕರ್ನಾಟಕ ನಕಾಶೆ, ನವಿಲು ಹಾಗೂ ತರಕಾರಿಯಿಂದ ರಚಿಸಿರುವ ರಂಗೋಲಿ ಆಕರ್ಷಣೆಯಾಗಿವೆ.



**ಹಲವು ಬಗೆಯ ಹಣ್ಣು, ತರಕಾರಿ ಹಾಗೂ ಹೂಗಳ ಪ್ರದರ್ಶನ:**

ಮೇಳದಲ್ಲಿ ಜಿಲ್ಲೆಯಲ್ಲಿ ಬೆಳೆಯುವ ಹಣ್ಣುಗಳಾದ ಬಾಳೆ, ದ್ರಾಕ್ಷಿ, ದಾಳಿಂಬೆ, ಪೇರು, ಬಾರೇಕಾಯಿ, ನಿಂಬೆ, ಚಿಕ್ಕು, ರೋಸ್ ಆಪಲ್, ನೇರಳೆ, ಅಂಜೂರ, ಪಪಾಯ ಹಾಗೂ ತರಕಾರಿಗಳಾದ ಈರುಳ್ಳಿ, ಬದನೆ, ಟೊಮೋಟೊ, ಕುಂಬಳಕಾಯಿ, ಹಾಗಲಕಾಯಿ, ಬೆಂಡೆಕಾಯಿ, ಬೀಟ್ರೂಟ್, ಮೂಲಂಗಿ, ಪಾಲಕ್, ಕ್ಯಾಬೇಜ್, ಮೆಕ್ಕೇಕಾಯಿ, ನುಗ್ಗೆಕಾಯಿ ವಿವಿಧ ಬಗೆಯ ಹೂಗಳಾದ ಸೇವಂತಿಗೆ, ಚೆಂಡು ಹೂ, ಸುಗಂಧರಾಜ, ಮಲ್ಲಿಗೆ, ಕನಕಾಂಬರ, ಗುಲಾಬಿಗಳನ್ನು ಪ್ರದರ್ಶನದಲ್ಲಿವೆ.

**ಬೋನ್ಸಾಯ್ ಗಿಡಗಳು ಪ್ರದರ್ಶನ:**

ಆಲದಮರ, ಹಲಸಿನ ಮರ, ಅರಳಿಮರ, ನೇರಳೆ, ವಿವಿಧ ಬೋನ್ಸಾಯ್ ಪದ್ಧತಿಯಲ್ಲಿ ಬೆಳೆದ ಗಿಡಗಳ ಪ್ರದರ್ಶನದಲ್ಲಿವೆ.

**ಪ್ರದರ್ಶನ ಹಾಗೂ ಮಾರಾಟ ಮಳಿಗೆ:**

ಪಶುಪಾಲನಾ ಮತ್ತು ವೈದ್ಯಕೀಯ ಸೇವಾ ಇಲಾಖೆ, ರೇಷ್ಮೆ ಇಲಾಖೆ, ತಾಳೆ ಬೆಳೆ ಅಭಿವೃದ್ಧಿ ಯೋಜನೆ, ಭಾಗ್ಯಜ್ಯೋತಿ ರೈತ ಉತ್ಪನದ ಮಳಿಗೆ, ಜಿಲ್ಲಾ ಸ್ವೀಪ್ ಸಮಿತಿಯಿಂದ ಮತದಾನ ಜಾಗೃತಿ ಅಭಿಯಾನ, ಹಾಪ್‌ಕಾಮ್ಸ್, ಸೋಲಾರ್ ವಾಟರ್ ಪಂಪ್‌ಸೆಟ್‌ಗಳ ಪ್ರದರ್ಶನ, ವಿವಿಧ ಕಂಪನಿಗಳ ಟ್ರಾಕ್ಟರ್, ರೋಟಿವೆಟರ್ ಕೃಷಿ ಯಂತ್ರೋಪಕರಣಗಳ ಸೆರಿದಂತೆ ಕೃಷಿ ಪರಿಕರಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳಿವೆ.

ಸಿಎಚ್‌ಡಿ ಯೋಜನೆಯ ವಿದ್ಯಾರ್ಥಿಗಳಿಗಾಗಿ ತೋಟಗಾರಿಕಾ ಕಾರ್ಯಕ್ರಮದಡಿಯಲ್ಲಿ ಶಾಲಾ ಮಕ್ಕಳಿಗೆ ತೋಟಗಾರಿಕಾ ಪರಿಕರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಋಷಿಕೇಶ ಸೋನಾವಣೆ, ತೋಟಗಾರಿಕಾ ಇಲಾಖೆಯ ಉಪ ನಿರ್ದೇಶಕ ಬಾವಿದೊಡ್ಡಿ ರಾಹುಲಕುಮಾರ, ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕರಾದ ಸಿ.ಬಿ.ದೇವರಮನಿ, ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿ ರಾಮಣ್ಣ ಅಥಣಿ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ದಾನಮ್ಮ ಪಾಟೀಲ ರಾಷ್ಟ್ರೀಯ ತೋಟಗಾರಿಕಾ ಮಂಡಳಿಯ ಆಡಳಿತ ಮಂಡಳಿಯ ನಿರ್ದೇಶಕ ಬಿ.ಎಮ್,ಕೋಕರೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



# ರುದ್ರಾಕ್ಷ ದೀಕ್ಷೆಯಿಂದ ಧನಾತ್ಮಕ ಶಕ್ತಿ ವೃದ್ಧಿ



**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಯುವಕರಲ್ಲಿನ ರಾಷ್ಟ್ರಪ್ರೇಮ, ದೇಶಭಕ್ತಿ, ಧರ್ಮ ಪರಂಪರೆಗಳು ದೂರ ಸರಿಯುತ್ತಿವೆ ಎಂದು ಯರನಾಳ ಹಿರೇಮಠದ ಪ್ರವಚನ ಭಾಸ್ಕರ, ಶಿವಪ್ರಸಾದ ದೇವರು ನುಡಿದರು.

ತಾಲೂಕಿನ ನಾಗರಬೆಟ್ಟ ಗ್ರಾಮದ ಪಾಟೀಲ್ ಆಕ್ಸಫರ್ಡ ಪಿಯು ಕಾಲೇಜಿನ ಆವರಣದಲ್ಲಿ, ಕುಂಟೋಜಿ ಸಂಸ್ಥಾನ ಹಿರೇಮಠದ ಡಾ.ಚನ್ನವೀರ ದೇವರ ಗುರುಪಟ್ಟಾಧಿಕಾರ ಮಹೋತ್ಸವದ ನಿಮಿತ್ಯವಾಗಿ ಶಾಲಾ ವಿದ್ಯಾರ್ಥಿಗಳಿಗೆ ರುದ್ರಾಕ್ಷ ದೀಕ್ಷೆ ನೀಡಿ ಅವರು ಮಾತನಾಡಿದರು.

ಧರ್ಮದ ಹೆಸರಿನಲ್ಲಿ ವಿದ್ಯಾರ್ಥಿಗಳಲ್ಲಿ ದ್ವೇಷದ ಭಾವ ಮೂಡಿಸಲಾಗುತ್ತಿದೆ. ದೇಶದ ಐಕ್ಯತೆಯನ್ನ ಎತ್ತಿ ಹಿಡಿಯುವಲ್ಲಿ ವಿದ್ಯಾರ್ಥಿಗಳು ಮುಂದಾಗಬೇಕು. ಧರ್ಮ ಧರ್ಮಗಳಲ್ಲಿ ಸಹಿಷ್ಣುತೆ ಭಾವ, ಸಾಮರಸ್ಯದ ಜೀವನ ರೂಪಿಸಿಕೊಳ್ಳಬೇಕು. ನಮ್ಮ ಧರ್ಮದ ಆಚರಣೆ ಮನೆಯಲ್ಲಿಯೇ ಇರಬೇಕು. ಶಾಲಾ ಕಾಲೇಜುಗಳಿಗೆ ಬಾರದಂತೆ ನೋಡಿಕೊಳ್ಳಬೇಕು ಎಂದರು.

> ಈಗಲೇ ಎಲ್ಲ ಕಾಲೇಜು ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ದೇಶಭಕ್ತಿ ಸಾಮರಸ್ಯದಿಂದ ಬದುಕಲು ವಿದ್ಯಾರ್ಥಿಗಳಿಗೆ ಪ್ರೇರೇಪಿಸಲಾಗಿದೆ. ಸನಾತನ ಧರ್ಮ ಪರಂಪರೆ ಸಂಸ್ಕೃತಿ ಸಂಸ್ಕಾರಗಳ ಬಗ್ಗೆ ಮಕ್ಕಳಿಗೆ ತಿಳಿಹೇಳಲಾಗಿದೆ. ಭಕ್ತರು ಹಾಗೂ ವಿದ್ಯಾರ್ಥಿಗಳಿಗೆ 20 ಸಾವಿರ ರುದ್ರಾಕ್ಷವನ್ನು ಧಾರಣ ಮಾಡಲಾಗಿದೆ.
>
> **– ಡಾ. ಚನ್ನವೀರ ದೇವರು, ಕುಂಟೋಜಿ.**

ದೋಟಿಹಾಳದ ಪೂಜ್ಯರಾದ ಚಂದ್ರಶೇಖರ ದೇವರು ಮಾತನಾಡಿ, ವಿದ್ಯಾರ್ಥಿಗಳಿಗೆ ಶಿಕ್ಷಣ ಪ್ರಧಾನವಾದದ್ದು. ವಿದ್ಯಾರ್ಥಿ ಆರ್ಥಿಕವಾಗಿ ಸಾಮಾಜಿಕವಾಗಿ ಪ್ರಗತಿ ಸಾಧಿಸಬೇಕಾದರೆ, ಶಿಕ್ಷಣ ಮಹೋನ್ನತ ಪಾತ್ರ ನಿರ್ವಹಿಸುತ್ತದೆ. ಗುರುವಿನಿಂದ ಸಂಸ್ಕಾರ ಶಿಕ್ಷಣದಿಂದ ಸಂಸ್ಕೃತಿ ಕಲಿತಾಗ ಮಾತ್ರ ಜೀವನದ ಗುರಿ ಸಾಧಿಸಲು ಸಾಧ್ಯವಾಗುತ್ತದೆ. ಎಂದರು.

ಪಿ.ಬಿ.ಹುಣಷ್ಯಾಳ ಹಿರೇಮಠದ ಆನಂದ ದೇವರು ಮಾತನಾಡಿ, ವೀರಶೈವ ಲಿಂಗಾಯತ ಧರ್ಮದ ಕುರುಹು ಆದ ರುದ್ರಾಕ್ಷಿ ಧಾರಣ ಮಾಡುವುದರಿಂದ ಓದಿನಲ್ಲಿ ಏಕಾಗ್ರತೆ ಹೆಚ್ಚಾಗಿ ಭಯ ಆತಂಕ ದೂರವಾಗುತ್ತದೆ. ರುದ್ರಾಕ್ಷ ದೀಕ್ಷೆಯಿಂದ ಋಣಾತ್ಮಕ ಗುಣಗಳನ್ನು ಹೊರಹಾಕಿ ಧನಾತ್ಮಕ ಶಕ್ತಿ ವೃದ್ಧಿಸುತ್ತದೆ ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಡಾ.ಚನ್ನವೀರದೇವರು ವಹಿಸಿ ಆಶೀರ್ವಚನ ನೀಡಿದರು. ಹುಬ್ಬಳ್ಳಿ ಮೂರುಸಾವಿರ ಮಠದ ಸಾಧಕರಾದ ಪೂಜ್ಯ ಶಿವಬಸವ ದೇವರು ಪ್ರಾಸ್ತಾವಿಕವಾಗಿ ಮಾತಾಡಿದರು. ಆಕ್ಸಫರ್ಡ ಪಾಟೀಲ ಸಂಸ್ಥೆಯ ಅಧ್ಯಕ್ಷ ಅಮಿತಗೌಡ ಪಾಟೀಲ ಎಲ್ಲ ಶ್ರೀಗಳನ್ನ ಸತ್ಕರಿಸಿ ಆಶೀರ್ವಾದ ಪಡೆದರು. ಇದೇ ಸಂದರ್ಭದಲ್ಲಿ ಎಲ್ಲ ವಿದ್ಯಾರ್ಥಿಗಳಿಗೆ ರುದ್ರಾಕ್ಷ ಧಾರಣ ಮಾಡಲಾಯಿತು. ಶಿಕ್ಷಕ ಪರಶುರಾಮ ಹೂಗಾರ ನಿರೂಪಿಸಿ ವಂದಿಸಿದರು.

# ದೇಶದಲ್ಲಿ ಜ್ಞಾನದ ದೀವಿಗೆ ಹಚ್ಚಿದ ವಿವೇಕಾನಂದರು



**ಉದಯರಶ್ಮಿ ನ್ಯೂಸ್**

ಇಂಡಿ: ದೇಶದಲ್ಲಿ ಜ್ಞಾನದ ದೀವಿಗೆ ಹಚ್ಚಿದ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಪ್ರತೀ ವರ್ಷ ರಾಷ್ಟ್ರೀಯ ಯುವ ದಿನವನ್ನಾಗಿ ಆಚರಿಸಲಾಗುತ್ತದೆ. ಯುವಕರೇ ಈ ದೇಶದ ಶಕ್ತಿ ಎಂದು ಯುವ ಜನಸಮೂಹವನ್ನು ಒಂದುಗೂಡಿಸುವ ಕಾರ್ಯ ಮಾಡಿದ್ದು ಸ್ವಾಮಿ ವಿವೇಕಾನಂದರು ಎಂದು ಶಿವಾನಂದ ಕಾಮಗೊಂಡ ಹೇಳಿದರು.

ಶುಕ್ರವಾರ ಪಟ್ಟಣದ ಸಿಂದಗಿ ರಸ್ತೆಯ ಸಿ.ವಿ. ಥ್ವಿರಾಮನ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಸ್ವಾಮಿ ವಿವೇಕಾನಂದರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು,

ಯುವಕರು ದುಶ್ಚಟಗಳಿಂದ ದೂರವಾಗಬೇಕು. ಈ ನೆಲದ ಸಂಸ್ಕೃತಿ, ಸಂಸ್ಕಾರ, ಬೆಳೆಸಿಕೊಳ್ಳಬೇಕು. ಯುವಕರು ಮನಸ್ಸು ಮಾಡಿದ್ದಲ್ಲಿ ಜಗತ್ತಿನ ಅತ್ಯಂತ ಸದೃಢ ದೇಶವನ್ನಾಗಿ ಮಾಡಬಹುದು ಎಂದರು.

ನಿರ್ದೇಶಕ ಮಹಾವೀರ್ ವರ್ಧಮಾನ ಮಾತನಾಡಿದರು.

ವಿದ್ಯಾರ್ಥಿಗಳಾದ ತೇಜಸ್ವಿನಿ ಗೋಳಗಿ, ಶ್ರೇಯಸ್ ಹಿರೇಮಠ, ದಿನಾಚರಣೆ ಅಂಗವಾಗಿ ಏರ್ಪಡಿಸಿದ ಸ್ಪರ್ಧೆಯಲ್ಲಿ ಪ್ರಥಮ ಹಾಗೂ ದ್ವಿತೀಯ ಪಾರಿತೋಷಕ ಪಡೆದರು. ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಎಬಿವಿಪಿ ಕಾರ್ಯಕರ್ತರಾದ ಕುಮಾರ ಸಚಿನ ಧನಗೊಂಡ ಮತ್ತು ಸ್ನೇಹಿತರು ಈ ಸಂದರ್ಭದಲ್ಲಿ ಹಾಜರಿದ್ದರು.

ಸನ್ಮತಿ ಹಳ್ಳಿ, ಶೈಲೇಶ ಬೀಳಗಿ, ಪ್ರಸನ್ನ ನಾಡಗೌಡ, ಶೋಭಾ ನಾರಾಯಣಕರ ಸೇರಿದಂತೆ ಮತ್ತಿತರರು ಇದ್ದರು

# ರಾಮನ ತತ್ವಗಳು ವಿಶ್ವಕ್ಕೆ ಆದರ್ಶಪ್ರಾಯ



**ಉದಯರಶ್ಮಿ ನ್ಯೂಸ್**

ತಿಕೋಟಾ: ಜನೆವರಿ 22ಕ್ಕೆ ನಡೆಯುವ ಆಯೋಧ್ಯೆಯ ಶ್ರೀರಾಮಚಂದ್ರನ ರಾಮಲಲ್ಲಾ ಮೂರ್ತಿ ಪ್ರತಿಷ್ಠಾಪನೆ ಹಾಗೂ ದೇವಾಲಯದ ಉದ್ಘಾಟನೆಯು ಅಖಂಡ ಭಾರತದ ಸನಾತನ ಸಂಸ್ಕೃತಿಗೆ ಸಂದ ಜಯ. ರಾಮನ ಆದರ್ಶ, ರಾಮನ ತತ್ವಗಳು ದೇಶಕ್ಕಷ್ಟೇ ಅಲ್ಲದೇ ವಿಶ್ವಕ್ಕೂ ಆದರ್ಶಪ್ರಾಯವಾಗಿದೆ ಎಂದು ಪ್ರವಚಕಾರ ಬಾಬುರಾವ್ ಮಹಾರಾಜರು ಹೇಳಿದರು.

ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದಲ್ಲಿ ಜರುಗಿದ ಪ್ರಭು ಶ್ರೀ ರಾಮಚಂದ್ರನ ಬೃಹತ್ ಶೋಭಾಯಾತ್ರೆಯಲ್ಲಿ ಅವರು ಮಾತನಾಡಿದರು.

ರಾಮ ವಿಷ್ಣುವಿನ ಏಳನೇ ಅವತಾರ ಎಂದು ಪೂಜಿಸುತ್ತಾರೆ. ರಾಮಮಂದಿರದ ಬಾಗಿಲು ತೆರೆಯುವ ದಿನಕ್ಕಾಗಿ ಭಕ್ತರು ಕಾಯುತ್ತಿದ್ದು, ಶೀಘ್ರದಲ್ಲಿ ದೇಗುಲ ಭಕ್ತರ ಪ್ರವೇಶಕ್ಕೆ ತೆರೆಯಲಿದೆ. ರಾಮ ಮಂದಿರವು ರಾಷ್ಟ್ರೀಯ ದೇವಾಲಯವಾಗಬೇಕು. ಯುವಕರು ಕಾಶಿಯೊಂದಿಗೆ ಅಯೋಧ್ಯೆಯ ದರ್ಶನವನ್ನೂ ಮಾಡಬೇಕು ಎಂದು ನಿವೃತ್ತ ಉಪನ್ಯಾಸಕ ರೇ ಸಿ ಪಾಟೀಲ ಹೇಳಿದರು.

ಈ ಸಂದರ್ಭದಲ್ಲಿ ಲಿಂಗರಾಜ ಪಾಟೀಲ, ಅರವಿಂದ್ ಮಾಲಗಾರ, ತುಕಾರಾಮ ನಲವಡೆ, ರಾಜಕುಮಾರ ತಿವಾರಿ, ಮೊನೇಶ್ ಪತ್ತಾರ, ಗಣೇಶ ಗುಗ್ಗರಿ, ಧರೆಪ್ಪ ಹೆಚ್ ಡಿ, ಸುರೇಶ ನರಳೆ, ಸಂಜು ಯಚ್ಚಿ, ಗೋವಿಂದ ರಜಪೂತ, ಶ್ರೀಶೈಲ ಕೊರಬು, ಮಹಾಂತೇಶ ಮಾಲಗಾರ ಇತರರು ಇದ್ದರು.

# ವಚನಗಳ ಸಾರ ಮೈಗೂಡಿಸಿಕೊಂಡರೆ ಜೀವನ ಸಾರ್ಥಕ

**ಉದಯರಶ್ಮಿ ನ್ಯೂಸ್**



**ಸಿಂದಗಿ:** 12ನೇ ಶತಮಾನದಲ್ಲಿ ಮಹಾಶರಣ ಶರಣೆಯರು ಅನೇಕ ಸಂದೇಶಗಳನ್ನು ನೀಡಿ ಅಳಿದು ಹೋಗಿದ್ದಾರೆ. ಆದರೆ ಅವರು ಬಿಟ್ಟು ಹೋದ ವಚನಗಳ ಸಾರವನ್ನು ನಾವೆಲ್ಲರೂ ಮೈಗೂಡಿಸಿಕೊಂಡಿದ್ದಾದರೆ ಜೀವನ ಸಾರ್ಥಕವಾಗುತ್ತದೆ ಎಂದು ತಾಲೂಕು ಪಂಚಮಸಾಲಿ ಸಮಾಜದ ಅಧ್ಯಕ್ಷ ಎಂ.ಎಂ.ಹಂಗರಗಿ ಹೇಳಿದರು.

ತಾಲೂಕಿನ ಹಿಕ್ಕನಗುತ್ತಿ ಗ್ರಾಮದ ಲಿಂಗಾಯತ ಮಹಾಮಠದ ಆವರಣದಲ್ಲಿ ಐಕ್ಯ ಮಂಟಪದ ಶಿಲಾನ್ಯಾಸವನ್ನು ನೆರವೇರಿಸಿ ಮಾತನಾಡಿ, ಹರ ಮುನಿದರೆ ಗುರು ಕಾಯುವನು ಎಂಬಂತೆ ನಾವೆಲ್ಲರು ಬಸವ ತತ್ವಗಳನ್ನು ಪ್ರತಿ ಮನೆ ಮನೆಗಳಿಗೆ ರವಾನಿಸುವದರಿಂದ ಜಗತ್ತಿನಲ್ಲಿ ನಡೆಯುತ್ತಿರುವ ಅಂಧಕಾರಗಳನ್ನು ದೂರ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಬಸವದಳದ ಮಾಜಿ ಅಧ್ಯಕ್ಷ ಗುರುಪಾದ ತಾರಾಪುರ ಮಾತನಾಡಿ, ಹಿಂದೂ ಎನ್ನುವುದು ಧರ್ಮವಲ್ಲ. ಲಿಂಗಾಯತ ಎನ್ನುವುದು ಧರ್ಮವಾಗಿದೆ. ಯಾರು ಲೀಂಗವನ್ನು ಧರಿಸುತ್ತಾರೆ ಅವರೇ ಲಿಂಗಾಯತರು ಈ ಪದಕ್ಕೆ ಯಾವುದೇ ಜಾತಿಯ ನಿರ್ಭಂಧವಿಲ್ಲ. ಅಂತೆಯೇ 12ನೇ ಶತಮಾನದಲ್ಲಿ ಜಗಜ್ಯೋತಿ ಬಸವೇಶ್ವರರರು ಮಹಾಮಂಟಪವನ್ನು ನಿರ್ಮಾಣ ಮಾಡಿ ಸಮಾನತೆಯ ಸಂದೇಶವನ್ನು ನೀಡಿದ್ದಾರೆ ಎಂದರು.

ಕಾರ್ಯಕ್ರಮಕ್ಕೂ ಮುನ್ನ ತಡವಲಗಾ ಗ್ರಾಮದ ಪ್ರಥಮ ಧರ್ಜೆ ಗುತ್ತಿಗೆದಾರ ಚಂದ್ರಶೇಖರ ರೂಗಿಯವರು ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ತಡವಲಗಾ ಗ್ರಾಮದ ಮರುಳಸಿದ್ದ ಸಂಸ್ಥಾನದ ಚೇರಮನ್‌ರಾದ ತಮ್ಮಣ್ಣ ಪೂಜಾರಿ ಮಾತನಾಡಿ, ಮಠ-ಮಂದಿರಗಳಲ್ಲಿ ನಡೆಯುವ ತತ್ವ ಭೋಧನೆಯಿಂದ ಜನರಲ್ಲಿ ಸಂಸ್ಕಾರ ಬೆಳೆಯುತ್ತದೆ. ಆ ಕಾರಣಕ್ಕೆ ಪ್ರತಿ ವರ್ಷದ ಸುಗ್ಗಿಕಾಲ ಮುಗಿದ ಬಳಿಗ ಶರಣರ ಮಹಾಂತರ ಪುರಾಣ-ಪ್ರವಚನಗಳು ನಡೆಯುತ್ತಿರುವುದು ಸರ್ವೇಸಾಮಾನ್ಯವಾಗಿದೆ. ಅಲ್ಲದೆ ಬಸವಣ್ಣನವರ ಐಕ್ಯಸ್ಥಳ ಕೂಡಲ ಸಂಗಮವಾಗಿದ್ದು, ದುರ್ಬಲರಿಗೆ ಅಲ್ಲಿಗೆ ಹೋಗಿ ದರ್ಶನ ಪಡೆಯಲು ಸಾಧ್ಯವಿಲ್ಲ. ಅದೇ ರೂಪದಲ್ಲಿ ಐಕ್ಯ ಮಂಟಪ ನಿರ್ಮಿಸುತ್ತಿರುವುದರಿಂದ ಈ ಬಾಗದಲ್ಲಿ ಕಲ್ಯಾಣದ ಅನುಭವ ಹಂಚಿದಂತಾಗಿದೆ ಎಂದು ಹೇಳಿದರು.

ಲಿಂಗಾಯತ ಮಹಾಮಠದ ಪೀಠಾಧಿಪತಿ ಪ್ರಭುದೇವರು ಆಶಿರ್ವಚನ ನೀಡಿ, ದಾನ-ಜ್ಞಾನ ಒಬ್ಬರಲ್ಲಿ ಇರುವುದು ವಿರಳ ಇವೆರಡು ಸಮರ್ಥವಿದ್ದವರು ಮಹಾಶರಣ ತತ್ವ ಪ್ರಚಾರಕರಲ್ಲಿ ಮಾತ್ರ ಇರುತ್ತದೆ ಎಂದು ಆಶಿರ್ವದಿಸಿದರು.

ಐಕ್ಯ ಮಂಟಪದಲ್ಲಿ ಪ್ರತಿಸ್ಥಾಪಿಸಲಾಗುತ್ತಿರುವ ಬಸವಣ್ಣನವರ ಮೂರ್ತಿಯ ವೆಚ್ಚವನ್ನು ಪ್ರಥಮ ದರ್ಜೆ ಗುತ್ತಿಗೆದಾರ ಚಂದ್ರಶೇಖರ ರೂಗಿ ಭರಿಸಿದ್ದಾರೆ.

ಈ ಸಂದರ್ಭದಲ್ಲಿ ಕಾನಿಪ ಅಧ್ಯಕ್ಷ ಆನಂದ ಶಾಬಾದಿ, ಅಶೋಕ ಮಿರ್ಜಿ, ಮಾಜಿ ಸೈನಿಕ ಚಂದ್ರಕಾಂತ ಸಣ್ಣಮನಿ, ಕಸಾಪ ಅಧ್ಯಕ್ಷ ಶಿವಾನಂದ ಬಡಾನೂರ, ಕಾನಿಪ ಧವನಿ ಸಂಘದ ಅಧ್ಯಕ್ಷ ಪಂಡಿತ ಯಂಪೂರೆ, ನಿವೃತ್ತ ಶಿಕ್ಷಕ ಆರ್.ಕೆ.ಕುಲಕರ್ಣಿ, ಸಂಗಣ್ಣ ಬ್ಯಾಕೋಡ, ಸಿದ್ದು ಸುಂಠಿ ಕೊರಳ್ಳಿ, ನಾಗೂ ಬಿರಾದಾರ, ಶಿವಣ್ಣ ಖಜೂರ್ಗಿ, ಅಣ್ಣು ಮದರಿ, ಎಂ.ಎಸ್.ಬಿರಾದಾರ ನಾಗರಳ್ಳಿ, ಶಾಂತೂ ರಾಣಾಗೋಳ ಸೇರಿದಂತೆ ಅನೇಕರಿದ್ದರು.

ನಿವೃತ್ತ ಶಿಕ್ಷಕ ಎಂ.ಜಿ.ತಳವಾರ, ಶಿವಕುಮಾರ ಶಿವಶಿಂಪಿ ಕಾರ್ಯಕ್ರಮ ನಿರ್ವಹಿಸಿದರು.

# ಎಲ್ಲ ಧರ್ಮಗಳ ತಿರುಳು ಒಂದೇ :ಡಾ.ಅರವಿಂದ

**ಉದಯರಶ್ಮಿ ನ್ಯೂಸ್**




ಸಿಂದಗಿ: ಧರ್ಮವೆಂದರೆ ಅದೊಂದು ಜಾತಿ ಸೂಚಕ ಪದವಲ್ಲ ಅದು ತತ್ವ ಸೂಚಕ ಪದವಾಗಿದೆ. ಆದರೆ ಅದಕ್ಕೊಂದು ಬಣ್ಣದ ಲೇಪನ ಮೆತ್ತಿಕೊಳ್ಳುವ ದುಶ್ಕೃತ್ಯ ನಡೆಯುತ್ತಿದೆ. ಎಲ್ಲ ಧರ್ಮಗಳ ತಿರುಳು ಒಂದೇ ಎಂದು ತಿಳಿದುಕೊಂಡಾಗ ಮಾತ್ರ ಭಾವನಾತ್ಮಕ ಸಂಬಂಧ ಬೆಸೆಯಲು ಸಾದ್ಯವಾಗುತ್ತದೆ ಎಂದು ಸಿ.ಎಂ. ಮನಗೂಳಿ ಕಾಲೇಜಿನ ಪ್ರಾಧ್ಯಾಪಕ ಡಾ.ಅರವಿಂದ ಮನಗೂಳಿ ಹೇಳಿದರು.

ಪಟ್ಟಣದ ಅಂಜುಮಾನ್ ಕಾಲೇಜ್ ಕ್ಯಾಂಪಸ್‌ನಲ್ಲಿರುವ ಕರ್ನಾಟಕ ಶಿಕ್ಷಣ ಸೊಸೈಟಿ ಹಾಗೂ ಅಂಜುಮಾನ್-ಇ-ಇಸ್ಲಾಂ ಎಜುಕೇಶನ್ ಸೊಸೈಟಿ ಜಂಟಿಯಾಗಿ ಆಯೋಜಿಸಲಾಗಿದ ಫಾಲ್ಕನ್ ಹೊಸ ಯುಗದ ವಿಜ್ಞಾನ ಮತ್ತು ವಾಣಿಜ್ಯ ಪು ಪೂ ಕಾಲೇಜು ವಿದ್ಯಾರ್ಥಿಗಳ ವಾರ್ಷಿಕ ಸ್ನೇಹ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿ, 15ರಿಂದ 20 ವಯಸ್ಸಿನ ವಿದ್ಯಾರ್ಥಿಗಳು ಧರ್ಮವನ್ನು ಪರಿಪಾಲನೆ ಮಾಡದೇ ಹೋದರೆ ಜೀವನ ದುಸ್ತರವಾಗುತ್ತದೆ. ಅದನ್ನು ಸರಿಯಾಗಿ ಪಾಲಿಸಿದ್ದಾದರೆ ಜೀವನದಲ್ಲಿ ಯಶಸ್ಸು ಕಾಣಲು ಸಾಧ್ಯ ಎಂದರು.

ಬೆಂಗಳೂರು ಫಾಲ್ಕನ್ ಗ್ರೂಪ್ ಆಫ್ ಇನ್ಸಿಟ್ಯೂಟ್‌ನ ವ್ಯವಸ್ಥಾಪಕ ನಿರ್ದೇಶಕ ಅಬ್ದುಲ್ ಸುಭಾನ್ ಮಾತನಾಡಿ, ಡ್ರಗ್ಸಗೆ ಹೊಂದಿಕೊಂಡು ಮಕ್ಕಳ ಜೀವನ ಹಾಳಾಗುತ್ತಿದೆ. ಬರೀ ಗೂಗಲ್ ಪ್ರೀಯರಾಗಿ ಡಿಗ್ರಿ ಸರ್ಟಿಫಿಕೇಟಗೋಸ್ಕರ ಶಿಕ್ಷಣ ಪಡೆಯದೇ ಮನಸಾಪುರ್ವಕ ಶಿಕ್ಷಣ ಪಡೆದು ಇಂದು ಜಾರಿಯಾಗುತ್ತಿರುವ ಹೊಸ ಶಿಕ್ಷಣ ನೀತಿಗೆ ಪೂರಕವಾಗಿ ಶಿಕ್ಷಣ ರೂಪಿಸಿಕೊಂಡು ಮೌಲ್ಯಯುತ ಜೀವನ ರೂಪಿಸಿಕೊಂಡು ತಂದೆ-ತಾಯಿ-ಶಿಕ್ಷಣ ಸಂಸ್ಥೆಯ ಗೌರವ ಹೆಚ್ಚಿಸಬೇಕು ಎಂದು ತಿಳಿಸಿದರು.

ಬೆಂಗಳೂರು ಎಚ್.ಸಿ.ಎಲ್ ಕಂಪನಿಯ ನಿರ್ದೇಶಕ ಪವನ ಶರ್ಮಾ ಮಾತನಾಡಿ, ವಿಜ್ಞಾನ ವಿಬಾಗದಲ್ಲಿ ಒಳ್ಳೆಯ ಅಂಕ ಪಡೆದರೆ ಸಾಲದು ಅದಕ್ಕೆ ಪೂರಕವಾಗಿ ನೀಟ್ ಪರೀಕ್ಷೆ ಹೆಚ್ಚಿನ ಅಂಕ ಪಡೆದಾಗ ಮಾತ್ರ ಎಂ.ಬಿಬಿಎಸ್, ಇಂಜನಿಯರಿಂಗ್ ಪ್ರವೇಶ ಪಡೆಯಲು ಸಾಧ್ಯ. ಕಾರಣ ಅವೆರಡರ ಕಡೆಗೆ ಮುಖ ಮಾಡದೇ ಜಗತ್ತಿನಲ್ಲಿ ಹೊಸ ಹೊಸ ತಂತ್ರಜ್ಞಾನಗಳು ಸಾಕಷ್ಟಿವೆ. ಅವುಗಳ ಕಡೆಗೆ ಒಲವು ತೋರಬೇಕು. ಎಚ್‌ಸಿಎಲ್ ಕಂಪನಿಯು ಹೊಸ ಹೊಸ ಆಯುಷ್ಕಾರ ಹೊಂದಿರುವ ಕಂಪನಿಗಳಲ್ಲಿ ಕೆಲಸ ಗಿಟ್ಟಿಸಿಕೊಳ್ಳಲು ತರಬೇತಿ ನೀಡುತ್ತದೆ. ಅದರ ಸದುಪಯೋಗ ಪಡೆದುಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಷ್ಕೃತ ಪತ್ರಕರ್ತ ರಫೀ ಭಂಡಾರಿ ಮಾತನಾಡಿ, ವಿಜ್ಞಾನ, ತಂತ್ರಜ್ಞಾನ ಯುಗದಲ್ಲಿ ಬರೀ ಡಾಕ್ಟರರು ಮತ್ತು ಇಂಜನೀಯರರಾಗಿ ದುಡ್ಡು ಗಳಿಸಿದರೆ ಸಾಲದು, ಸಮಾಜವನ್ನು ತಿದ್ದಲು ಪತ್ರಕರ್ತರ ಕಾರ್ಯವು ಅತ್ಯಮೂಲ್ಯವಾದದ್ದು. ಅದಕ್ಕೆ ಸಾಮಾಜಿಕವಾಗಿ ಮುಂದುವರೆಯಲು ಪತ್ರಿಕೋದ್ಯಮದ ಕಡೆಗೆ ಆಸಕ್ತಿ ವಹಿಸಿ ಸಮಾಜದ ಎಡರು ತೊಡರುಗಳನ್ನು ತಿದ್ದುವ ಕಾರ್ಯಕ್ಕೆ ಮುಂದಾಗಿ ಎಂದು ಕರೆ ನೀಡಿದರು.

ಸಾನಿಧ್ಯ ವಹಿಸಿದ ರಾಂಪೂರ್ ಪಿ.ಎ.ಆರೂಡಮಠದ ನಿತ್ಯಾನಂದ ಮಹಾರಾಜರು, ವಿಜಯಪುರ ಸಹಕಾರ ವಿಭಾಗದ ನಿವೃತ್ತ ಜಂಟಿ ರಿಜಿಸ್ಟ್ರಾರ್ ಎಸ್.ಎಸ್.ಬೀಳಗಿಪೀರಾ, ಅಧ್ಯಕ್ಷತೆ ವಹಿಸಿದ ಕರ್ನಾಟಕ ಶಿಕ್ಷಣ ಸೊಸೈಟಿಯ ಅಧ್ಯಕ್ಷ ಎಸ್.ಎಂ.ಪಾಟೀಲ (ಗಣಿಹಾರ್) ಮಾತನಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಚೇರಮನ್ ಎ.ಎ.ದುದನಿ, ನಿರ್ದೇಶಕರಾದ ಮೆಹಬೂಬ್ ಹಸರಗುಂಡಗಿ, ಝುಡ್.ಐ.ಅಂಗಡಿ, ಪ್ರಾಚಾರ್ಯ ಶ್ರೀಮತಿ. ಮುಬೀನಾ ಸುಲ್ತಾನ್, ಆಲಮೇಲದ ರಿಯಾಜ್ ಬಿಳವಾರ, ಬಿ.ಎಂ.ಬಿರಾದಾರ, ಎಂ.ಎಸ್.ಹಯಾಳಕರ, ಪಾಲಕರ ಪ್ರತಿನಿಧಿ ಅಲ್ಲಾಬಕ್ಷ ಮುಲ್ಲಾ, ಆಲಮೇಲ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸಾಧಿಕ ಸುಂಬಡ, ಅಶೋಕ ಕೊಳಾರಿ, ಪ್ರಭುಲಿಂಗ ಲೋಣಿ ವೇದಿಕೆ ಮೇಲಿದ್ದರು.

ಮಹ್ಮದಲಿ ಹುಬಳಿ ಮೌಲಾನಾ ಕುರಾನ ಪಠಣ ಮಾಡಿದರು. ಪೂಜಾ ಮತ್ತು ಸಂಗಡಿಗರು ಭರತನಾಟ್ಯ ಮಾಡಿದರು.

ಆಸ್ಪೀಯಾ ಬಂಥನಾಳ, ಶೃತಿ ಮೋರೆ ನಿರೂಪಿಸಿದರು. ಪ್ರಾಧ್ಯಾಪಕ ಐಸ್ವಾಮಿಲು ಸ್ವಾಗತಿಸಿದರು. ಉಪನ್ಯಾಸಕಿ ಸಭಾ ಪಾಟೀಲ ವಂದಿಸಿದರು.

## ವಿಜಯಪುರದ ಬಂಜಾರಾ ಪಿಯು ಕಾಲೇಜು ವತಿಯಿಂದ ಕುಷ್ಟ ರೋಗಿಗಳಿಗೆ ಅನ್ನಸಂತರ್ಪಣೆ

# ಕುಷ್ಟರೋಗಿಗಳ ಆತ್ಮಗೌರವಕ್ಕೆ ಧಕ್ಕೆ ತಾರದಿರಿ :ನಿಂಬರಗಿ

**ಉದಯರಶ್ಮಿ ನ್ಯೂಸ್**



**ವಿಜಯಪುರ:** ಬಂಜಾರಾ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯದಿಂದ ವಿದ್ಯಾರ್ಥಿಗಳೊಂದಿಗೆ ಉಪನ್ಯಾಸಕರು ವಿಜಯಪುರದ ಶಿವಗಿರಿಯ ಪಕ್ಕದಲ್ಲಿರುವ "ಕುಷ್ಟರೋಗಿಗಳ ಕಾಲೋನಿಗೆ ಹೋಗಿ ಕುಷ್ಟರೋಗಿಗಳಿಗೆ ಅನ್ನಸಂತರ್ಪಣೆ ಮಾಡಿಸಿ ಮಾನವೀಯತೆ ಮೆರೆದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಎಂ.ಎಸ್.ನಿಂಬರಗಿ ಮಾತನಾಡಿ, ಕುಷ್ಟರೋಗಿಗಳ ಆತ್ಮಗೌರವಕ್ಕೆ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು, ಕುಷ್ಟ ರೋಗಿಗಳ ಕಾರ್ಯ ಚಟುವಟಿಕೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆಯಬೇಕು. ಕುಷ್ಟರೋಗಕ್ಕೆ ಅಂಟಿಕೊಂಡಿರುವ ಕಳಂಕ, ತಾರತಮ್ಯ ಹೋಗಲಾಡಿಸಲು ಅಧಿಕಾರಿಗಳು ಶ್ರಮಿಸಬೇಕು. ಸಮಾಜದ ಮುಖ್ಯ ವಾಹಿನಿಯಲ್ಲಿ ಗೌರವಯುತವಾಗಿ ಬದುಕಲು ಅವಕಾಶ ಮಾಡಿಕೊಡಬೇಕು ಎಂದು ಸಲಹೆ ನೀಡಿದರು.

ಈ ವೇಳೆಯಲ್ಲಿ ಎಸ್.ಎಸ್. ತೆನಿಹಳ್ಳಿ ಮಾತನಾಡಿ, ಕುಷ್ಟರೋಗ ಗುಣಪಡಿಸಬಹುದಾದ ರೋಗ. ಗಾಂಧೀಜಿ ಅವರ ಆಶಯದಂತೆ ಕುಷ್ಟರೋಗ ಮುಕ್ತ ಭಾರತ ನಿರ್ಮಿಸುವ ಅಗತ್ಯವಿದೆ. ಜನರಲ್ಲಿ ಕುಷ್ಠ ರೋಗದ ಲಕ್ಷಣಗಳು, ಚಿಕಿತ್ಸೆ ಮತ್ತು ಅಪನಂಬಿಕೆಗಳ ಮಾಹಿತಿ ನೀಡುವ ಮೂಲಕ ರೋಗಿಗಳನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಮೂಲಕ ಗೌರವಯುತವಾಗಿ ಬದುಕಲು ಅವಕಾಶ ಕಲ್ಪಿಸಬಹುದಾಗಿದೆ ಎಂದು ಹೇಳಿದರು.

ಈ ಕಾರ್ಯಕ್ಕೆ ಬಿಜಾಪುರ ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಡಿ.ಎಲ್.ಚವ್ಹಾಣ್, ಕಾರ್ಯಾಧ್ಯಕ್ಷ ಕೆ.ಜಿ.ರಾಠೋಡ, ಕಾರ್ಯದರ್ಶಿ ಆರ್.ಡಿ.ಚವ್ಹಾಣ್, ಪ್ರಾಚಾರ್ಯ ಎಸ್.ಬಿ.ಪವಾರ, ಉಪನ್ಯಾಸಕ ಶಿವಕುಮಾರ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಸ್ವಾಮಿ ವಿವೇಕಾನಂದರ ವ್ಯಕ್ತಿತ್ವ ಯುವಕರಿಗೆ ಪ್ರೇರಣೆ



**ಉದಯರಶ್ಮಿ ನ್ಯೂಸ್**

ಇಂಡಿ: ಪಟ್ಟಣದ ಎಸ್.ಎಸ್.ವಿ.ವಿ. ಸಂಘದ ಜಿ.ಆರ್. ಗಾಂಧಿ ಕಲಾ, ವಾಯ್.ಎ. ಪಾಟೀಲ ವಾಣಿಜ್ಯ ಹಾಗೂ ಎಮ್.ಎಫ್. ದೋಶಿ ವಿಜ್ಞಾನ ಪದವಿ ಮಹಾವಿದ್ಯಾಲಯದಲ್ಲಿ ಎನ್.ಎಸ್.ಎಸ್, ಯುತ್ ರೆಡ್‌ಕ್ರಾಸ್ ಹಾಗೂ ಸ್ಕೌಟ್ಸ್ & ಗೈಡ್ಸ್ ಘಟಕಗಳ ಅಡಿಯಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ಪ್ರಯುಕ್ತ ರಾಷ್ಟ್ರೀಯ ಯುವ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ತಾಂಬಾ ಗ್ರಾಮದ ಎಸ್.ಆರ್. ಮಾಳಗೆ ಕಲಾ ವಾಣಿಜ್ಯ ಮಹಾವಿದ್ಯಾಲಯದ ಉಪನ್ಯಾಸಕ ಶಿವಾನಂದ ವಾಲೀಕಾರ ಮಾತನಾಡಿ, ಸ್ವಾಮಿ ವಿವೇಕಾನಂದರ ಜೀವನ ಮತ್ತು ವ್ಯಕ್ತಿತ್ವ ಕೋಟಿ ಕೋಟಿ ಯುವಕರಿಗೆ ಪ್ರೇರಣೆಯ ಚಿಲುಮೆಯಾಗಿದೆ. ಅವರು ಭಾರತ ದೇಶದ ಕೀರ್ತಿ ಪತಾಕೆಯನ್ನು ವಿಶ್ವಮಟ್ಟದಲ್ಲಿ ಪಸರಿಸಿದ ಧೀಮಂತ ನಾಯಕರು. 1893 ರಲ್ಲಿ ಚಿಕ್ಯಾಗೋದಲ್ಲಿ ನಡೆದ ವಿಶ್ವಧರ್ಮ ಸಮ್ಮೇಳನದಲ್ಲಿ ನೀಡಿದ ಭಾಷಣ ಅವಿಸ್ಮರಣೀಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಎಸ್.ಬಿ. ಜಾಧವ ಮಾತನಾಡಿ, ಸ್ವಾಮಿ ವಿವೇಕಾನಂದ ಭಾರತದ ಏಳಿಗೆಗಾಗಿ ಶ್ರಮಿಸಿದ ಮಹಾನ್ ವ್ಯಕ್ತಿ. ಒಬ್ಬರು ಆಧ್ಯಾತ್ಮದ ಮಾರ್ಗ ಅನುಸರಿಸಿದರು. ಅವರ ಉದ್ದೇಶವು ಭಾರತದ ಏಳಿಗೆ ಆಗಿತ್ತು ಎಂದು ಹೇಳಿದರು.

ಉಪನ್ಯಾಸಕ ಬಿ.ಹೆಚ್. ಬಗಲಿ ಮಾತನಾಡಿ, ಸ್ವಾಮಿ ವಿವೇಕಾನಂದ ಅಂದರೆ ಭಾರತ, ಭಾರತ ಅಂದರೆ ಸ್ವಾಮಿ ವಿವೇಕಾನಂದರು ಎಂದು ಹೇಳಿದರು.

ಕಾರ್ಯಕ್ರಮದ ನಿರೂಪಣೆಯನ್ನು ಸಹಾಯಕ ಪ್ರಾಧ್ಯಾಪಕ ಡಾ. ಶ್ರೀಕಾಂತ ರಾಠೋಡ, ಸ್ವಾಗತವನ್ನು ಸಹಾಯಕ ಪ್ರಾಧ್ಯಾಪಕ ಡಾ.ವಿಶ್ವಾಸ ಕೊರವಾರ, ವಂದನಾರ್ಪಣೆಯನ್ನು ಸಹಾಯಕ ಪ್ರಾಧ್ಯಾಪಕ ಡಾ. ಸುರೇಂದ್ರ ಕೆ, ಅವರು ನಿರ್ವಹಿಸಿದರು.

ಸಹಾಯಕ ಪ್ರಾಧ್ಯಾಪಕರಾದ ಡಾ. ಆನಂದ ನಡವಿನಮನಿ, ಶ್ರೀಶೈಲ ಸಣ್ಣಕ್ಕಿ, ಡಾ. ಸಿ.ಎಸ್. ಬಿರಾದಾರ, ಡಾ. ಜಯಪ್ರಸಾದ ಡಿ, ಎಮ್.ಆರ್. ಕೋಣದೆ, ಆರ್.ಪಿ. ಇಂಗನಾಳ, ಸೇರಿದಂತೆ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿ ವೃಂದ ಉಪಸ್ಥಿತರಿದ್ದರು.

# ವಿವೇಕಾನಂದರ ತತ್ವಾದರ್ಶ ಯುವ ಜನಾಂಗ ಅಳವಡಿಸಿಕೊಳ್ಳಲಿ



**ಉದಯರಶ್ಮಿ ನ್ಯೂಸ್**

ಇಂಡಿ: ಸ್ವಾಮಿ ವಿವೇಕಾನಂದರ ತತ್ವ, ಸಿದ್ಧಾಂತ ಆದರ್ಶ ಇಂದಿನ ಯುವ ಜನಾಂಗ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಕಾರ್ಯ ಮಾಡಬೇಕು ಅಂದಾಗ ಮಾತ್ರ ವಿವೇಕಾನಂದರ ಜಯಂತ್ಯುತ್ಸವಕ್ಕೆ ಮೆರಗು ಬರುತ್ತದೆ ಎಂದು ತಹಸೀಲ್ದಾರ ಬಿ.ಎಸ್. ಕಡಕಭಾವಿ ಹೇಳಿದರು.

ಶುಕ್ರವಾರ ಪಟ್ಟಣದ ಸ್ವಾಮಿ ವಿವೇಕಾನಂದ ವೃತ್ತದಲ್ಲಿ ವಿವೇಕಾನಂದರ 161 ನೇ ಜಯಂತ್ಯೋತ್ಸವದ ಪ್ರಯುಕ್ತ ಯುವ ಶಕ್ತಿ ಸಂಘ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿ ಅವರು ಮಾತನಾಡಿದರು.

ಸಂಘದ ಅಧ್ಯಕ್ಷ ರಾಮಸಿಂಗ ಕನ್ನೊಳ್ಳಿ, ಅವಿನಾಶ ಬಗಲಿ ಪ್ರಾಸ್ತಾವಿಕ ಮಾತನಾಡಿದರು.

ಮುಖಂಡರಾದ ಜಗದೀಶ ಕ್ಷತ್ರಿ, ಸತೀಶ ಕುಂಬಾರ, ಶ್ರೀಕಾಂತ ಕುಡಿಗನೂರ, ಬಾಳು ಮುಳಜಿ, ಪ್ರಕಾಶ ಬಿರಾದಾರ, ಸಂತೋಷ ಪಾಟೀಲ, ವೆಂಕಟೇಶ ಕುಲಕರ್ಣಿ, ಮಲ್ಲಿಕಾರ್ಜುನ ಹತ್ತಿ, ಅರವಿಂದ ಪಾಟೀಲ, ಚಂದು ದೇವರ, ನಾಗರಾಜ ದಶವಂತ, ಆನಂದ ದೇವರ ಸೇರಿದಂತೆ ಮತ್ತಿತರರು ಇದ್ದರು.

# ಸ್ವಾಮಿ ವಿವೇಕಾನಂದರು ಯುವಶಕ್ತಿಗೆ ಮಾದರಿ :ಹವಳಗಿ




**ಉದಯರಶ್ಮಿ ನ್ಯೂಸ್**

ಇಂಡಿ: ಸ್ವಾಮಿ ವಿವೇಕಾನಂದರು ಯುವಶಕ್ತಿಗೆ ಮಾದರಿ ಅವರ ಆದರ್ಶ ತತ್ವಗಳನ್ನು ಯುವಕರು ರೂಡಿಸಿಕೊಳ್ಳಬೇಕು ಎಂದು ಉಪನ್ಯಾಸಕ ಶಶಿಕಾಂತ ಹವಳಗಿ ಹೇಳಿದರು.

ಶುಕ್ರವಾರ ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜು ಐ.ಕ್ಯೂ.ಎ.ಸಿ ವಿಭಾಗದ ವತಿಯಿಂದ ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನಂದರ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದರು.

ವಿದ್ಯಾರ್ಥಿಗಳಾದ ಪೂಜಾ ಸಾರವಾಡ, ಬಸವರಾಜ ಪೂಜಾರಿ, ಬೀರಪ್ಪ ನಂದಗೊಂಡ, ಬಸವರಾಜ ಹಿರೇಕುರಬರ, ಜಯಣ್ಣ ಕುಂಬಾರ, ಚಂದನಾ ಕೆಂಗನಾಳ ಮೊದಲಾದವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಐ.ಕ್ಯೂ.ಎ.ಸಿ ವಿಭಾಗದ ಸಂಯೋಜಕ ಡಾ. ಶೀರಿನುಸುಲ್ತಾನಾ ಎಸ್, ಇನಾಮದಾರ ವಹಿಸಿಕೊಂಡಿದ್ದರು.

ವೇದಿಯಲ್ಲಿ ಪ್ರೊ.ಕಿರಣ ರೇವಣಕರ, ಪ್ರೊ.ಎಸ್.ಜೆ. ಮಾಡ್ಯಾಳ, ಪ್ರೊ. ಪರಸಪ್ಪ ಎಸ್. ದೇವರ, ಡಾ.ವಿಜಯಮಹಾಂತೇಶ ದೇವರ, ಡಾ.ಸುರೇಖಾ ವಾರದ, ಪ್ರೊ.ಭಾರತಿ ಹೊನವಾಡ, ಪ್ರೊ. ಆರ್.ಬಿ.ಮುದ್ದೇಬಿಹಾಳ, ಸೋಮಲಿಂಗ ಎಸ್. ಗಂಜಿ ಇದ್ದರು.

# ನಮೋ ಬ್ರಿಗೇಡ್ ದಿಂದ 'ನೀನೇ ಹನುಮ' ರಥಯಾತ್ರೆ



**ಉದಯರಶ್ಮಿ ನ್ಯೂಸ್**

ಇಂಡಿ: ಅಯೋಧ್ಯೆಯಲಿ ಪ್ರಭು ಶ್ರೀರಾಮ ಮಂದಿರ ಉದ್ಘಾಟನೆ ಪೂರ್ವಭಾವಿಯಾಗಿ ನಮೋ ಬ್ರಿಗೇಡ್ ವತಿಯಿಂದ ನೀನೇ ಹನುಮ ರಥಯಾತ್ರೆ ಪ್ರಾರಂಭವಾಗಿದ್ದು ಶುಕ್ರವಾರ ರಥ ಯಾತ್ರೆ ತಾಲೂಕಿನ ತಡವಲಗಾ ಗ್ರಾಮಕ್ಕೆ ಬಂದಿತು.

ತಾಲೂಕಿನಲ್ಲಿ ಝಳಕಿಯಿಂದ ರಥಯಾತ್ರೆ ಪ್ರಾರಂಭವಾಗಿದ್ದು ಬಳ್ಳೊಳ್ಳಿ, ತಡವಲಗ ಬೋಳೆಗಾಂವ, ಹಿರೇರೂಗಿ, ಇಂಡಿ, ಅಗರಖೇಡ ಗ್ರಾಮಗಳಿಗೆ ಆಗಮಿಸಿ ಅಲ್ಲಿನ ಸಾವಿರಾರು ಸಂಖ್ಯೆಯಲ್ಲಿನ ಹಿಂದೂ ಭಾಂಧವರು ಭಾಗವಹಿಸಿ ರಥಯಾತ್ರೆಯನ್ನು ಅದ್ದೂರಿಯಾಗಿ ಬರಮಾಡಿಕೊಂಡರು.

ತಡವಲಗಾ ಗ್ರಾಮಕ್ಕೆ ರಥಯಾತ್ರೆ ಆಗಮಿಸುತ್ತಿದ್ದಂತೆ ತಡವಲಗಾ ಹಿರೇಮಠದ ಅಭಿನವ ರಾಚೋಟೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ ನಡೆದ ಬೈಕ್ ಯಾತ್ರೆ ಅಗರಖೇಡ ಗ್ರಾಮದಲ್ಲಿ ಮುಕ್ತಾಯವಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಭಿನವ ರಾಚೋಟೇಶ್ವರ ಶಿವಾಚಾರ್ಯರು, ಅಂದು ಶ್ರೀರಾಮಮಂದಿರ ಸಲುವಾಗಿ ನಡೆದ ಹೋರಾಟ ಹಾಗೂ ಕಾರ್ಯಕರ್ತರ ಬಲಿದಾನದ ಫಲ ರಾಮ ಮಂದಿರ ನಿರ್ಮಾಣ ಆಗುತ್ತಿದ್ದು ಸಂತಸದ ವಿಷಯ. ಇಂದು ಹನುಮ, ರಾಮ ಯಾತ್ರೆ ನಮ್ಮ ನಿಮ್ಮ ಗ್ರಾಮಗಳಿಗೆ ಆಗಮಿಸಿದ್ದು ರಥಯಾತ್ರೆ ನೋಡುವುದೇ ನಮ್ಮ ನಿಮೆಲ್ಲರ ಸೌಭಾಗ್ಯವಾಗಿದೆ ಎಂದರು.

# ಭಾರತೀಯರ ಬ್ರಾತೃತ್ವ ಭಾವ ವಿಶ್ವಕ್ಕೆ ತೋರಿಸಿದ ವಿವೇಕಾನಂದರು



**ಉದಯರಶ್ಮಿ ನ್ಯೂಸ್**

ಇಂಡಿ: ಸ್ವಾಮಿ ವಿವೇಕಾನಂದರು ಚಿಕಾಗೋ ಉಪನ್ಯಾಸದಿಂದ ಭಾರತದ ದೃಷ್ಟಿಕೋನವನ್ನು ವಿಶ್ವದ ಮುಂದೆ ವಿಶಿಷ್ಟ ರೀತಿಯಲ್ಲಿ ಪ್ರದರ್ಶಿಸಿದ್ದು, ನಮ್ಮ ದೇಶದ ಸಂಸ್ಕೃತಿ ಅನಾವರಣಗೊಳಿಸಿದ ಹಿರಿಮೆಯ ಭಾಷಣವಾಗಿತ್ತು ಎಂದು ವಿಶ್ವಭಾರತಿ ವಿದ್ಯಾಕೇಂದ್ರ ಪ್ರಾಥಮಿಕ, ಪ್ರೌಢ ಹಾಗೂ ಬೀರಲಿಂಗೇಶ್ವರ ಪಬ್ಲಿಕ್ ಆಂಗ್ಲ ಮಾಧ್ಯಮ ಸಂಸ್ಥೆಯ ಸಂಸ್ಥಾಪಕ ಪಿ.ಜಿ.ಕಲ್ಮನಿ ಹೇಳಿದರು.

ಶುಕ್ರವಾರ ತಾಲೂಕಿನ ಹಿರೇಬೇವನೂರ ಗ್ರಾಮದ ವಿಶ್ವ ಭಾರತಿ ವಿದ್ಯಾಕೇಂದ್ರ ಪ್ರಾಥಮಿಕ, ಪ್ರೌಢ ಹಾಗೂ ಶ್ರೀ ಬೀರಲಿಂಗೇಶ್ವರ ಪಬ್ಲಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ನಡೆದ ಸ್ವಾಮಿ ವಿವೇಕಾನಂದರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ವಾಮಿ ವಿವೇಕಾನಂದರಂತಹ ಆದರ್ಶ ಪುರುಷರನ್ನು ನಾವು ಆದರ್ಶವಾಗಿ ಇಟ್ಟುಕೊಂಡು ನಡೆದರೆ ಸಮಾಜದಲ್ಲಿ ಉತ್ತಮ ನಾಗರೀಕರಾಗಿ ಬಾಳಿ ಉನ್ನತ ಸಾಧನೆ ಮಾಡಲು ಸಾದ್ಯವಾಗುತ್ತದೆ ಎಂದರು.

ಸಂಸ್ಥೆಯ ಅಧ್ಯಕ್ಷ ವಿ.ಜಿ. ಕಲ್ಮನಿ ಮಾತನಾಡಿ, ಸ್ವಾಮಿ ವಿವೇಕಾನಂದರು ಜಗತ್ತಿಗೇ ಹಿಂದೂ ಧರ್ಮದ, ಮತ್ತು ಭಾರತೀಯರ ಬ್ರಾತೃತ್ವ ಭಾವನೆ ಜಗತ್ತಿಗೆ ತೋರಿಸಿದ ಮಹಾನ್ ಪುರುಷರು. ಅವರ ವಾಣಿಯಂತೆ ಯುವಕರು ಸಾಗಿದರೆ ಇಂದು ರಾಷ್ಟ್ರೀಯ ಯುವ ದಿನಾಚರಣೆ ಆಚರಿಸುವುದು ಸಾರ್ಥಕವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಶ್ರೀದೇವಿ ಕಲ್ಮನಿ, ಆಂಗ್ಲ ಮಾಧ್ಯಮ ಮುಖ್ಯ ಗುರು ಸುನಿಲ್ ವಿ.ಆರ್, ಶಿಕ್ಷಕರಾದ ಪ್ರಕಾಶ್ ಕಲ್ಮನಿ, ತುಕಾರಾಮ್ ಚವ್ಹಾಣ, ಸಚೀನ್ ಅಡಿಗುಂಡಿ, ಪರಮೇಶ್ವರ ಇಂಗಳೆ, ಪ್ರವೀಣ್ ಹೊಸಗೌಡರ್, ರಾಮ್ ಚವ್ಹಾಣ, ಜಾನ್ ವಿ, ಥಾಮಸ್ ಎಸ್.ಜಿ, ಹ್ಯಾರಿಶ್, ಎಲ್.ಎನ್. ಕರ್ಜಗಿ, ಶಿವಾನಂದ ಅಂದೇವಾಡಿ, ಜೆ.ಎ. ಬಿರಾದಾರ, ಎಸ್.ಎಮ್. ಭಾಸಗಿ, ಬಿ.ಕೆ. ಉಕ್ಕಲಿ, ಬಿ.ಎಸ್. ನಾಟೀಕಾರ್, ಎಸ್.ಬಿ. ಮಾನೆ, ಎಸ್.ಬಿ. ವಳಸಂಗ, ಅನಿತಾಗೌಡ, ರಾಜೇಶ್ವರಿ ಗೌಡ, ಗಿರಿಜಾ, ರಾಜಶ್ರೀ ಸಂಗಮ್, ಅಶ್ವಿನಿ ಚವ್ಹಾಣ, ಸಾರಾ ಕೆ, ದೀಪಾಮಾಲಾ, ಜೀನತ್ ಮಧು ಸೇರಿದಂತೆ ಅನೇಕರು ಇದ್ದರು.

ಶಿಕ್ಷಕ ಶಿವಾನಂದ ಕಲ್ಮನಿ ನಿರೂಪಿಸಿ, ವಂದಿಸಿದರು.

# ಹಿರೇಮಸಳಿ: ವಿವೇಕಾನಂದರ ಜಯಂತಿ



**ಉದಯರಶ್ಮಿ ನ್ಯೂಸ್**

ಇಂಡಿ: ತಾಲೂಕಿನ ಹಿರೇಮಸಳಿ ಗ್ರಾಮದ ವಿದ್ಯಾ ಜ್ಯೋತಿ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಸ್ವಾಮಿ ವಿವೇಕಾನಂದರ ಜಯಂತಿಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ ಟಿ.ಬಿ. ಶಿರಕನಹಳ್ಳಿ, ಕಾರ್ಯದರ್ಶಿ ಪುಂಡಲಿಕ ಕಪಾಲಿ, ಶಿಕ್ಷಕಿ ಶೋಭಾ, ಲಕ್ಷ್ಮೀ ಗೋರನಾಳ, ರಾಣಿ ಹತ್ತಿ, ಅಶ್ವಿನಿ ರಜಪೂತ್, ಬಸಮ್ಮ ಶಿರಕನಹಳ್ಳಿ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಕಲಕೇರಿ: ಶ್ರೀ ರಾಮರಕ್ಷೆ ಮಂತ್ರಾಕ್ಷತೆಗೆ ಸ್ವಾಗತ



**ಉದಯರಶ್ಮಿ ನ್ಯೂಸ್**

ಕಲಕೇರಿ: ಜ.22 ರಂದು ಮರ್ಯಾದಾ ಪುರುಷೋತ್ತಮ, ಅಯೋಧ್ಯೆ ಪ್ರಭು ಶ್ರೀ ರಾಮಚಂದ್ರ ಬಾಲರಾಮ ಮೂರ್ತಿ ಪ್ರತಿಷ್ಠಾನ ಹಿನ್ನೆಲೆಯಲ್ಲಿ ಶ್ರೀರಾಮರಕ್ಷೆ ಮಂತ್ರಾಕ್ಷತೆ ಪ್ರತಿ ಮನೆ ಮನೆಗೆ ತಲುಪಿಸಲು ಪರಮ ರಾಮ ಭಕ್ತ ಹನುಮನ ದಿನ ಶನಿವಾರ ಸಕಲ ವೈಭವದೊಂದಿಗೆ ಪುರ ಪ್ರವೇಶಕ್ಕೆ ಸ್ವಾಗತ ಮಾಡಿಕೊಳ್ಳಲಾಯಿತು.

ಗ್ರಾಮದ ಶ್ರೀ ಯಲ್ಲಾಲಿಂಗ ಮಠದಿಂದ ಶ್ರೀ ಗುರು ವೀರಘಂಟೈ ಮಡಿವಾಳೇಶ್ವರ ದೇವಸ್ಥಾನದವರೆಗೆ ಡೊಳ್ಳು ವಾದ್ಯ ಭಾಜಾ ಭಜಂತ್ರಿ ಮೆರವಣಿಗೆಯೊಂದಿಗೆ ಗ್ರಾಮದ ಹಿರೇಮಠದ ಸಿದ್ಧರಾಮ ಶಿವಾಚಾರ್ಯರು ಮತ್ತು ಗದ್ದುಗಿಮಠದ ಮಡಿವಾಳೇಶ್ವರ ಶಿವಾಚಾರ್ಯರ ಸಮ್ಮುಖದಲ್ಲಿ ಶ್ರೀರಾಮ ಭಕ್ತರು, ಯುವ ಸಮೂಹ ರಾಮನಾಮವನ್ನು ಪಠಿಸುತ್ತಾ ಜಯಘೋಷಗಳೊಂದಿಗೆ ಭಕ್ತಿಪೂರ್ವಕವಾಗಿ ಸ್ವಾಗತ ಮಾಡಿಕೊಂಡರು.

ಈ ವೇಳೆ ಶ್ರೀರಾಮ, ಲಕ್ಷ್ಮಣ, ಸೀತೆ ಮತ್ತು ಹನುಮನ ವೇಷಧರಿಸಿದ ಮುದ್ದು ಮಕ್ಕಳು ಎಲ್ಲರ ಗಮನ ಸೆಳೆದರು

# ಹಿರೇಕುರುಬರವಸ್ತಿ ಶಾಲೆಗೆ ಅಭಿನಂದನೆ ಪತ್ರ



**ಉದಯರಶ್ಮಿ ನ್ಯೂಸ್**

ತಿಕೋಟಾ: ತಾಲ್ಲೂಕಿನ ಬಾಬಾನಗರ ಗ್ರಾಮದ ಹಿರೇಕುರುಬರ ವಸ್ತಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ವಿಜಯಪುರ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಮೋದಿನಿ ಬಳೋಲಮಟ್ಟಿ ಹಾಗೂ ಕಛೇರಿ ತಂಡವು ಭೇಟಿ ನೀಡಿ ಶಾಲೆಯ ಸಮಗ್ರ ಮೌಲ್ಯಮಾಪನ ಮಾಡಿದಾಗ ಶಾಲಾ ಶೈಕ್ಷಣಿಕ, ಭೌತಿಕ ಸೌಲಭ್ಯ, ಉತ್ತಮ ಕಲಿಕಾ ವಾತಾವರಣ ಹಾಗೂ ಮಕ್ಕಳ ಕಲಿಕೆ ಕಂಡು ಶಾಲಾ ಶಿಕ್ಷಕರನ್ನು ಪ್ರಶಂಸಿಸಿ ಅಭಿನಂದನಾ ಪತ್ರ ವಿತರಿಸಿ ಸನ್ಮಾನಿಸಿದರು.

ಗ್ರಾಮದಿಂದ ಐದಾರು ಕಿಲೋಮೀಟರ್ ದೂರ ಇರುವ ವಸ್ತಿ ಶಾಲೆಯಲ್ಲಿ 127 ಮಕ್ಕಳು ದಾಖಲಾತಿ ಹೊಂದಿ ಪ್ರತಿದಿನ ನೂರಕ್ಕೆ ನೂರರಷ್ಟು ಹಾಜರಾತಿ ಹೊಂದಿ ಉತ್ತಮ ಕಲಿಕೆ ಸಾಗುತ್ತಿದೆ. ಶಾಲಾ ಸ್ವಚ್ಛತೆ, ಅಭಿವೃದ್ಧಿ, ಮಕ್ಕಳ ಸ್ಪಷ್ಟ ಓದು , ಶುದ ಬರಹ, ಗಣಿತದ ಮೂಲಕ ಕ್ರಿಯೆಗಳು, ಇಂಗ್ಲೀಷ್ ಕಲಿಕೆ ಎಲ್ಲವೂ ಅಚ್ಚುಕಟ್ಟಾಗಿ ಶಿಸ್ತುಬದ್ಧ ಕಲಿಕೆ ಕಂಡು ಬಂದಿತು. ಶೇ100 ಹಾಜರಾತಿ ಹೊಂದಿದ ವಿಶೇಷ ತೋಟದ ವಸ್ತಿ ಶಾಲೆಯಾಗಿದೆ. ಸಮಗ್ರ ಶಾಲೆಯ ಅಭಿವೃದ್ಧಿಯಾಗಬೇಕಾದರೆ ಇಲ್ಲಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಶ್ರಮ ಬಹಳಷ್ಟಿದೆ. ಅವರ ಪ್ರಾಮಾಣಿಕ ಬೋದನೆಗೆ ಮಕ್ಕಳಲ್ಲಿ ಉತ್ತಮ ಕಲಿಕೆಯಾಗಿದೆ ಎಂದು ಬಿಇಓ ಬಳೋಲಮಟ್ಟಿ ಖುಷಿ ಹಂಚಿಕೊಂಡರು.

ಅಭಿನಂದನೆ ಪತ್ರ ಸ್ವೀಕರಿಸಿ ಮಾತನಾಡಿದ ಮುಖ್ಯೋಪಾಧ್ಯಾಯ ಎಸ್.ಎನ್.ತಡಲಗಿ ಶಾಲೆಯ ಸಮಗ್ರ ಅಭಿವೃದ್ಧಿಗೆ ಗ್ರಾಮ ಪಂಚಾಯತಿ, ಎಸ್.ಡಿ.ಎಂ.ಸಿ, ಪಾಲಕರು, ಸಹಶಿಕ್ಷಕರಾದ ಹಣಮಂತ ಕಾಲೇಬಾಗ, ಎಸ್.ಎನ್.ಕಠಾರೆ, ಎಸ್.ಐ.ಬಾಗೇನವರ ಶ್ರಮದಿಂದ ಶಾಲೆಯೂ ಎಲ್ಲ ರೀತಿಯ ಅಭಿವೃದ್ಧಿ ಕಂಡಿದೆ. ಬಿಇಓ ಅವರಿಂದ ಪ್ರಶಂಸನಾ ಪತ್ರ ಪಡೆದುಕೊಂಡಿದ್ದು ತುಂಬಾ ಖುಷಿಯಾಯಿತು. ಇದರಿಂದ ಸೇವೆ ಮಾಡುವ ಜವಾಬ್ದಾರಿ ಇನ್ನೂ ಹೆಚ್ಚಾಯಿತು. ಶಾಲೆಯನ್ನು ಇನ್ನೂ ಅಭಿವೃದ್ಧಿ ಹೊಂದಲು ಪ್ರಾಮಾಣಿಕ ಸೇವೆ ಮಾಡುತ್ತೇವೆ ಎಂದರು.

ನೂರರಷ್ಟು ಹಾಜರಾತಿ ಹೊಂದಿರುವ ವಿಶೇಷ ತೋಟದ ವಸ್ತಿ ಶಾಲೆಯಾಗಿದೆ. ಶಿಕ್ಷಕರ ಶ್ರಮದಿಂದ ಮಕ್ಕಳಲ್ಲಿ ಉತ್ತಮ ಕಲಿಕೆಯಾಗಿದೆ.

**– ಪ್ರಮೋದಿನಿ ಬಳೋಲಮಟ್ಟಿ, ಬಿಇಓ, ವಿಜಯಪುರ ಗ್ರಾಮೀಣ**

ಶ್ರೀ ಶಿವದಾಸಿಮಯ್ಯ ಜಯಂತ್ಯೋತ್ಸವ । ಪ್ರತಿಭಾ ಪುರಸ್ಕಾರ । ದಾನಿಗಳಿಗೆ ಸನ್ಮಾನ

# ದುಡಿಮೆಯ ಸ್ವಲ್ಪ ಭಾಗ ಸಮಾಜಕ್ಕೆ ಮೀಸಲಿಡಿ :ಶಾಸಕ ಯತ್ನಾಳ

ಉದಯರಶ್ಮಿ ನ್ಯೂಸ್



ವಿಜಯಪುರ: ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ತೆಗೆದುಕೊಳ್ಳುವುದರ ಜೊತೆಗೆ ಸಮಾಜಕ್ಕೆ ಒಳಿತನ್ನು ಮಾಡುವ ಮನೋಭಾವನೆ ಉಳ್ಳವರಾಗಬೇಕೆಂದು ಬೆಳ್ಳರೆ ಬಸವಾನಂದ ಸ್ವಾಮೀಜಿ ಆಶೀರ್ವಚನ ನೀಡಿದರು.

ಶಿವಸಿಂಪಿ ಸಮಾಜ ಕಲ್ಯಾಣ ಸಂಘ (ರಿ) ವಿಜಯಪುರ ಇವರು ಹಮ್ಮಿಕೊಂಡಿರುವ ಶ್ರೀ ಶಿವದಾಸಿಮಯ್ಯ ಜಯಂತ್ಯೋತ್ಸವ 2022–23ರ ಪ್ರತಿಭಾ ಪುರಸ್ಕಾರ ಹಾಗೂ ದಾನಿಗಳಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಮೃತಾನಂದ ಮಹಾಸ್ವಾಮಿಗಳು ಗುರುದೇವ ಆಶ್ರಮ ಕಾತ್ರಾಳ ಬಾಲಗಾಂವ ಮತ್ತು ಸಿದ್ದರಾಮೇಶ್ವರ ಪಟ್ಟದ ದೇವರು ಬೋಳಚಿಂಚೋಳಿ ಇವರು ಸಾನಿಧ್ಯ ವಹಿಸಿದ್ದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಬಸನಗೌಡ ಆರ್ ಪಾಟೀಲ (ಯತ್ನಾಳ) ಅವರು, ಸಮಾಜ ಪ್ರಗತಿಯತ್ತ ಸಾಗಲು ಆಡಳಿತ ಮಂಡಳಿಯ ಪ್ರಾಮಾಣಿಕ, ಕ್ರಿಯಾಶೀಲತೆ ಹಾಗೂ ಉತ್ತಮ ಹಿನ್ನೆಲೆ ಕಾರಣ. ಆಡಳಿತ ಮಂಡಳಿ ಉತ್ತಮವಾಗಿದ್ದರೆ ಸಮಾಜದಿಂದ ಮತ್ತು ಜನ ಪ್ರತಿನಿಧಿಗಳಿಂದ ದೇಣಿಗೆ ಸಹಾಯ ಸಹಕಾರ ದೊರೆಯುತ್ತದೆ ಎಂದು ತಿಳಿಸಿ, ಸಮಾಜದಲ್ಲಿರುವ ಎಲ್ಲ ಜನರು ತಮ್ಮ ದುಡಿಮೆಯ ಸ್ವಲ್ಪ ಭಾಗವನ್ನು ಸಮಾಜದ ಅಭಿವೃದ್ಧಿಗೆ ಮೀಸಲಾಗಿಡಬೇಕೆಂದು ತಿಳಿಸಿದರಲ್ಲದೆ, ತಾವು ಕೂಡ ಸಹಾಯ ಮಾಡುವುದಾಗಿ ಭರವಸೆ ನೀಡಿದರು.

ವಿದ್ಯಾ ಸಂತೋಷ ಕಲ್ಯಾಣಶೆಟ್ಟಿ ಶಿವದಾಸಿಮಯ್ಯರ ಬಗೆಗೆ ಉಪನ್ಯಾಸ ನೀಡಿದರು.

ಶಿವಶಂಕರ ಎಂ ಸಿಂದಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಪ್ರತಿಭಾನ್ವಿತ 30 ವಿದ್ಯಾರ್ಥಿಗಳನ್ನು ಹಾಗೂ ದಾನಿಗಳಿಗೆ ಸನ್ಮಾನಿಸಲಾಯಿತು.


ಗಂಗಾಧರ ಯಾವಗಲ್ ಹಾಗೂ ವಿವಿಧ ಜಿಲ್ಲೆಗಳ ಜಿಲ್ಲಾ ಅಧ್ಯಕ್ಷರು ವೇದಿಕೆ ಮೇಲಿದ್ದರು.

ಈ ಸಮಯದಲ್ಲಿ ಆಡಳಿತ ಮಂಡಳಿಯ ಸರ್ವ ಸದಸ್ಯರು ಎಂ ಬಿ ಕನ್ನೂರ, ಅಪ್ಪು ಕಲ್ಯಾಣಶೆಟ್ಟಿ , ಶಿವಕುಮಾರ ಭುಯಾರ, ವೀರಭದ್ರ ಮೇತ್ರಿ , ಯುವರಾಜ ಚೋಳಕೆ, ಗುಂಡೇಶ್ವರ ಹಳಕಟ್ಟಿ, ಅನಿಲ್ ಭೂಸನೂರ, ಪಿ.ಎಂ.ಗಲಗಲಿ, ಪ್ರಸಾದ್ ಶಿವಸಿಂಪಿ, ಎಸ್ ಕೆ ಗೌಡ್ರು , ಅಧಿಕ ಸಂಖ್ಯೆಯಲ್ಲಿ ಮಹಿಳಾ ಮಂಡಲದ ಸದಸ್ಯರು ಸಕ್ರಿಯವಾಗಿ ಪಾಲ್ಗೊಂಡಿದ್ದರು.

ಸುನೀತಾ ಗಲಗಲಿ ಹಾಗೂ ಭುವನೇಶ್ವರಿ ಹಳಕಟ್ಟಿ ಇವರಿಂದ ಪ್ರಾರ್ಥನೆ ಹಾಗೂ ಸ್ವಾಗತ ಗೀತೆ, ಐ.ಎಸ್. ನರೂಣಿ ಇವರಿಂದ ಸ್ವಾಗತ ಮತ್ತು ಪರಿಚಯ, ಅನ್ನಪೂರ್ಣ ಭೂಸನೂರ ಇವರಿಂದ ನಿರೂಪಣೆ, ವಿಜಯಲಕ್ಷ್ಮಿ ಸೋಲಾಪುರ ಇವರಿಂದ ವಂದನಾರ್ಪಣೆ ಜರುಗಿದವು.

# ಗರ್ವ

ಉದಯರಶ್ಮಿ ನ್ಯೂಸ್



ವಿದ್ಯಾರ್ಥಿನಿಧಿ

– ಮಂಡ್ಯ.ಮ.ನಾ.ಉಡುಪ


ರೈತನೊಬ್ಬ ದೊಡ್ಡದಾದ ಗೂಳಿಯೊಂದನ್ನು ಸಾಕಿದ್ದ. ಅದು ನೋಡಲು ಬೃಹದಾಕಾರವಾಗಿ–ತ್ತು. ನೋಡಿದವರು ಅದರ ದೇಹ ನೋಡಿ ಭಯಪಡುವ ರೀತಿಯಲ್ಲಿತ್ತು. ನೋಡಲು ಮಾತ್ರ ಭಯಂಕರವಾಗಿದ್ದ ಗೂಳಿ ತುಂಬಾ ಸಾಧು ಸ್ವಭಾವದ್ದಾಗಿತ್ತು.

ರೈತ ತನ್ನ ಜಮೀನಿನ ಕೆಲಸ–ಕಾರ್ಯಗಳಿಗೆ ಈ ಗೂಳಿಯನ್ನು ಸಮರ್ಪಕವಾಗಿ ಬಳಸಿಕೊಳ್ಳುತ್ತಿದ್ದ. ಗೂಳಿಯೂ ಸಹ ರೈತನ ಜೊತೆಗೆ ಯಾವುದೇ ಮೈಗಳ್ಳತನ ಮಾಡದೇ ಪ್ರಾಮಾಣಿಕವಾಗಿ ದುಡಿಯುತ್ತಿತ್ತು.

ಅದೊಂದು ಮದ್ಯಾಹ್ನದ ಸಮಯದಲ್ಲಿ ಗೂಳಿಯನ್ನು ರೈತನು ವಿಶ್ರಾಂತಿಗಾಗಿ ಕೊಟ್ಟಿಗೆಯಲ್ಲಿ ಕಟ್ಟಿದ್ದ. ನೊಣವೊಂದು ಗೂಳಿಯ ಕೊಂಬಿನ ಮೇಲೆ ಬಂದು ಕುಳಿತಿತು. ಸ್ವಲ್ಪ ಸಮಯದ ನಂತರ ನೊಣವು ಹಾರಿಬಂದು ಗೂಳಿಯ ಎದುರಿಗೆ ಬಂದು ಹೇಳಿತು

“ ನನ್ನ ಕ್ಷಮಿಸು. ನನಗೆ ತಿಳಿಯದೇ ನಿನ್ನ ಕೊಂಬಿನ ಮೇಲೆ ಬಂದು ಕುಳಿತೆ. ಆಮೇಲೆ ತಿಳಿಯಿತು. ನನ್ನ ದೇಹದ ಭಾರದಿಂದಾಗಿ ನಿನಗೆ ನೋವಾಗುತಿದೆಯೆಂದು ... “

ಅದಕ್ಕೆ ಗೂಳಿ ನಗುತ್ತಾ ಹೇಳಿತು



“ ಮಿತ್ರಾ ನಿನ್ನಿಂದ ನನಗಾವ ನೋವಾಗಲಿ, ಭಾರವಾಗಲಿ ಆಗಿಲ್ಲ. ವಾಸ್ತವವಾಗಿ ಹೇಳಬೇಕೆಂದರೆ ನೀನು ನನ್ನ ಕೊಂಬಿನ ಮೇಲೆ ಕುಳಿತುಕೊಂಡ ವಿಚಾರ ನೀ ಹೇಳಿದ ಮೇಲೆ ನನಗೆ ತಿಳಿದಿದ್ದು .. “ ಎಂದಿತು.

ಅಲ್ಪರು ತಮ್ಮ ಕು–ರಿತಾಗಿ ತಾವೇ ವಿಪರೀತ ಕಲ್ಪನೆ ಮಾಡಿಕೊಂಡಿರುತ್ತಾರೆ. ಆದರೆ ಸಾಧುಗಳು ಸುಖ–ದುಃಖವನ್ನು ಸಮಾನವಾಗಿ ಸ್ವೀಕರಿಸುತ್ತಾರೆ “

# ಇಂಡಿ ಜಿಲ್ಲಾ ಕೂಗು: ಬೆಂಗಳೂರು–ದೆಹಲಿಗೆ ನಿಯೋಗಕ್ಕೆ ನಿರ್ಧಾರ



ಉದಯರಶ್ಮಿ ನ್ಯೂಸ್

ಇಂಡಿ: ಜಿಲ್ಲಾ ಮಾಡಬೇಕೆಂದು ಆಗ್ರಹಿಸಿ ಪಟ್ಟಣ ಮತ್ತು ತಾಲೂಕಿನ ಅಂಜುಮನ್ ಇಸ್ಲಾಂ ಸಮಿತಿಯ ಬಂಧುಗಳು ಪಟ್ಟಣದಲ್ಲಿ ಪ್ರತಿಭಟನೆ ನಡೆಸಿ ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಇವರಿಗೆ ಮನವಿ ಸಲ್ಲಿಸಿದರು.

ಇಂಡಿಯ ಅಂಜುಮನ್ ಇಸ್ಲಾಂ ಸಮಿತಿಯ ಅಧ್ಯಕ್ಷ ಅಫರುಲ ಹವಾಲದಾರ ಮಾತನಾಡಿ ಈಗಾಗಲೇ ಇಂಡಿಯ ಶಾಸಕರಾದಿಯಾಗಿ ಝಮೀರ್ ಅಹಮ್ಮದ ಖಾನರವರಿಗೆ ಇಂಡಿ ಜಿಲ್ಲೆ ಮಾಡುವ ಕುರಿತು ಮನವರಿಕೆ ಮಾಡಿದ್ದು ಅವರು ಸಹಕಾರ ನೀಡುವುದಾಗಿ ಒಪ್ಪಿದ್ದಾರೆ ಎಂದರು.

ಉಪಾಧ್ಯಕ್ಷ ಹುಸೇನ ಬೇಪಾರಿ ಮಾತನಾಡಿ, ಈಗಾಗಲೇ ರಾಜ್ಯದ ಹಲವಾರು ಇಂಡಿಗೆ ಚುನಾವಣೆ ಸಮಯದಲ್ಲಿ ಬಂದಾಗ ಮನವರಿಕೆ ಮಾಡಿದೆ. ಅದಲ್ಲದೆ ಮತ್ತೆ ಬೆಂಗಳೂರು ಮತ್ತು ದೆಹಲಿಗೆ ತೆರಳಿ ವರಿಷ್ಠರಿಗೆ ಮತ್ತು ಸಂಬಂಧಿತ ಅಧಿಕಾರಿಗಳಿಗೆ ಮನವರಿಕೆ ಮಾಡುತ್ತೇವೆ. ಈಗಾಗಲೇ ಹಲವಾರು ರಾಜ್ಯಗಳಲ್ಲಿ ಹೊಸ ಜಿಲ್ಲೆ ಮಾಡಿದಾಗ ಅಭಿವೃದ್ಧಿ ನೆಪದಲ್ಲಿ ಮಾಡಿದ ಹಲವಾರು ಕಾಗದ ಪತ್ರಗಳನ್ನು ಸಂಗ್ರಹಿಸಲಾಗಿದೆ ಎಂದರು.

ಪ್ರತಿಭಟನೆಯಲ್ಲಿ ಮೌಲಾನಾ ಝಿಯಾ ಉಲ್ ಹಕ್ ಉಮರಿ, ಬಾಗವಾನ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸತ್ತಾರ ಬಾಗವಾನ, ಪುರಸಭೆ ಸದಸ್ಯ ಜಹಾಂಗೀರ ಸೌದಾಗರ, ಜಬ್ಬಾರ ಅಣ್ಣಾ ಅರಬ್, ಹುಸೇನ ಜಮಾದಾರ, ಅಂಜುಮನ್ ಸಂಸ್ಥೆಯ ಮಾಜಿ ಅಧ್ಯಕ್ಷ ಮಹಮ್ಮದ ಬಾಗವಾನ, ಅಬ್ದುಲ್ ರಹಮಾನ ಅಂತೋಲೆ, ಇಲಿಯಾಸ ಬೋರಾಮಣಿ,ಮುನ್ನಾ ಬಾಗವಾನ, ಯಾಕುಬ ಮಾಶ್ಯಾಳಕರ, ರೈಸ ಅಷ್ಟೇಕರ ಮತ್ತಿತರಿದ್ದರು.

# ‘ಎಳ್ಳು ಬೆಲ್ಲ ತಿಂದು ಒಳ್ಳೆ ಮಾತಾಡಿ’– ಸಂಕ್ರಾಂತಿ ಹಬ್ಬದ ವಿಶೇಷತೆ

ಉದಯರಶ್ಮಿ ದಿನಪತ್ರಿಕೆ

ವಿಶೇಷ ಲೇಖನ

ಸಂಕ್ರಾಂತಿ ಹಬ್ಬವು ತುಂಬಾ ಮಹತ್ವವನ್ನು ಹೊಂದಿರುವಂತಹ ಹಬ್ಬವಾಗಿದೆ. ಈ ಹಬ್ಬವು ಧಾರ್ಮಿಕ



– ಸಂತೋಷ ಎಸ್ ಬಂಡೆ
ಶಿಕ್ಷಕರು, ನಾಗಠಾಣ.

ಮತ್ತು ವೈಜ್ಞಾನಿಕ ದೃಷ್ಟಿಕೋನದಿಂದ ತನ್ನ ಪ್ರಾಮುಖ್ಯತೆಯನ್ನು ಹೊಂದಿದೆ. ಈ ಹಬ್ಬವು ಜನರೊಂದಿಗೆ ಬೆರೆಯುವ ಮೂಲಕ ಸಂತೋಷವನ್ನು ಹಂಚುವ ಹಬ್ಬವಾಗಿದೆ. ನಮ್ಮ ಜೀವನವನ್ನು ಹಾಗೂ ನಮ್ಮ ಜೊತೆ ಇದ್ದವರನ್ನು ಸಂತೋಷದಿಂದಿಡುವ ಹಬ್ಬವಾಗಿದೆ. ಶಾಂತಿ ಮತ್ತು ಸೌಹಾರ್ದತೆಯಿಂದ ಬದುಕುವ ಗುರಿಯನ್ನು ಕೂಡ ಹೊಂದಿದ ಹಬ್ಬವಾಗಿದೆ. ಈ ಹಬ್ಬವನ್ನು ಸಂತೋಷ, ಸಂಪತ್ತು ಮತ್ತು ಸಮೃದ್ಧಿಯ ಸಂಕೇತವೆಂದು ಪರಿಗಣಿಸಲಾಗಿದೆ.

ನಮ್ಮ ಆಹಾರ ಬೆಳೆಯುವ ಕೃಷಿ ಭೂಮಿಗೆ ಪ್ರತಿಯೊಬ್ಬರೂ ಕೃತಜ್ಞರಾಗಿರಬೇಕು ಎಂಬುದೇ ಈ ಹಬ್ಬದ ಸುಂದರ ಸಂದೇಶವಾಗಿದ್ದು, ಎಲ್ಲರ ನಡುವೆ ಶಾಂತಿ, ಪ್ರೀತಿ ಮತ್ತು ಸೌಹಾರ್ದತೆಯನ್ನು ಪಸ–ರಿಸುವುದೇ ಹಬ್ಬದ ಸತ್ವವಾಗಿದೆ. ಈ ಹಬ್ಬದ ದಿನದಂದು ನೀವು ಎಲ್ಲೆಡೆ ಆಚರಣೆಗಳು, ಒಳ್ಳೆಯ ಆಹಾರ, ಹೊಸ ಬಟ್ಟೆ, ಸಂತೋಷ, ಸಂಭ್ರಮ, ಜನರನ್ನು ಭೇಟಿ ಮಾಡಿ ಶುಭಾಶಯ ಕೋರುವುದು ಮತ್ತು ಸಿಹಿ ವಿನಿಮಯ ಮಾಡಿಕೊಳ್ಳುವುದನ್ನು ರಾಜ್ಯದ ಮೂಲೆ ಮೂಲೆಗಳಲ್ಲಿ ನೋಡಲು ಸಾಧ್ಯ.

ಈ ದಿನದಂದು ರೈತರು ತಮ್ಮ ಕೃಷಿ ಭೂಮಿಯಲ್ಲಿ ಸೂರ್ಯ ದೇವನಿಗೆ ಬೆಳಕನ್ನು ಹೇರಳವಾಗಿ ಸುರಿಸುವಂತೆ ಪ್ರಾರ್ಥಿಸುತ್ತಾರೆ. ಸೂರ್ಯನ ಬೆಳಕು ಗಿಡಮರ ಬೆಳೆಗಳಿಗೆ ತುಂಬಾ ಒಳ್ಳೆಯದು. ಋತುವಿನ ಮೊದಲ ಸುಗ್ಗಿಯನ್ನು ಅವರ ಸುರಕ್ಷತೆ ಮತ್ತು ರಕ್ಷಣೆಗಾಗಿ ಕೃತಜ್ಞತೆಯ ಸಂಕೇತವಾಗಿ ಸೂರ್ಯ ದೇವರಿಗೆ ಅರ್ಪಿಸಲಾಗುತ್ತದೆ.ಇದು ಚಳಿಗಾಲದ ಉತ್ತುಂಗವಾಗಿರುವುದ–



ರಿಂದ, ಎಳ್ಳು ಮತ್ತು ಬೆಲ್ಲ ಆಧಾರಿತ ಸಿಹಿತಿಂಡಿಗಳನ್ನು ಸಾಮಾನ್ಯವಾಗಿ ಸೇವಿಸಲಾಗುತ್ತದೆ. ಈ ಎರಡು ಪದಾರ್ಥಗಳಲ್ಲಿ ಪೌಷ್ಟಿಕಾಂಶ ಸಮೃದ್ಧವಾಗಿದ್ದು ದೇಹಕ್ಕೆ ಉಷ್ಣತೆಯನ್ನು ನೀಡುತ್ತವೆ.ಈ ಹಬ್ಬದ ದಿನದಂದು “ಎಳ್ಳು ಬೆಲ್ಲ ತಿಂದು ಒಳ್ಳೆ ಮಾತಾಡಿ” ಎಂಬ ಜನಪ್ರಿಯ ಮಾತುಗಳೊಂದಿಗೆ ಜನರು ಪರಸರ



ಶುಭಾಶಯ ಕೋರುತ್ತಾರೆ.

ಸಂಕ್ರಾಂತಿ ಹಬ್ಬವನ್ನು ಎಳ್ಳು–ಬೆಲ್ಲದ ಹಬ್ಬ ಎನ್ನುತ್ತಾರೆ. ರೈತರು ತಾವು ಬೆಳೆದ ಬೆಳೆಗಳನ್ನು ರಾಶಿ ರಾಶಿಯಾಗಿ ಹಾಕಿ ಅದಕ್ಕೆ ಪೂಜೆ ಮಾಡುತ್ತಾರೆ.



ಈ ಕಾರಣಕ್ಕಾಗಿ ಸುಗ್ಗಿಯ ಹಬ್ಬ ಎನ್ನುತ್ತಾರೆ. ಸಂಕ್ರಾಂತಿಯ ಹಬ್ಬದ ದಿನ ಎಳ್ಳು ದಾನ ಮಾಡಬೇಕು ಎಂಬ ನಿಯಮವಿದೆ. ಎಳ್ಳು ಶನಿ ಗ್ರಹದ ಪ್ರತಿನಿಧಿ ಹಾಗೂ ಆತನ ಧಾನ್ಯವಾಗಿದೆ.

ಭೂಲೋಕದ ಪ್ರತ್ಯಕ್ಷ ದೇವರು ಎಂದರೆ ಸೂರ್ಯ ಭಗವಾನ್. ಈತನನ್ನು ಜಾತಿ, ಮತ ಭೇದವಿಲ್ಲದೆ ಪ್ರಪಂಚದ ಎಲ್ಲ ಜನರು ಆರಾಧಿಸುತ್ತಾರೆ. ಈ ಸೂರ್ಯ ನಮಗೆ ಬೆಳಕು ನೀಡುವುದಲ್ಲದೆ ಬದುಕನ್ನು ನೀಡುವನು ಹಾಗೂ ಈ ಜಗತ್ತಿನ ಅಂಧಕಾರವನ್ನು ಹೋಗಲಾಡಿಸುವನು. ಈತನು ಜ್ಞಾನದ ಸಂಕೇತವಾಗಿದ್ದಾನೆ. ಭಾಸ್ಕರ ಇಲ್ಲದಿದ್ದರೆ ಜಗತ್ತಿನ ಸಕಲ ಚಟುವಟಿಕೆಗಳು ನಿಂತು ಹೋಗುತ್ತದೆ.

ವೈಜ್ಞಾನಿಕ ರೀತಿಯಲ್ಲಿ ನೋಡಿದಾಗ ಸಂಕ್ರಾಂತಿಯ ಸಮಯದಲ್ಲಿ ಚಳಿ ಹೆಚ್ಚು ಇರುತ್ತದೆ. ಎಳ್ಳು ಸೇವನೆಯಿಂದ ದೇಹದ ಉಷ್ಣತೆ ಹೆಚ್ಚು ಆಗುತ್ತದೆ ಹಾಗೂ ಚರ್ಮದ ಕಾಂತಿಯೂ ಹೆಚ್ಚುತ್ತದೆ. ಈ ಹಬ್ಬವು ಅತ್ಯಂತ ಪ್ರಾಚೀನ ಕಾಲದಿಂದಲೂ ಆಚರಣೆಗೆ ಬಂದಿದೆ. ಜನಪದ ಗೀತೆಯಲ್ಲೂ ಸಂಕ್ರಾಂತಿಯ ಬಗ್ಗೆ ಹೇಳಿದೆ.

# ಸ್ನೇಹಜೀವಿ ಆರಕ್ಷಕ ಪ್ರಶಸ್ತಿಗೆ ಮೌಲಾಲಿ ಆಯ್ಕೆ

ಉದಯರಶ್ಮಿ ನ್ಯೂಸ್



ಸಿಂದಗಿ: ಬೆಂಗಳೂರಿನ ಸ್ನೇಹಜೀವಿ ಗೆಳೆಯರ ಬಳಗ ಸಾಹಿತ್ಯ ಘಟಕ ಕೊಡಮಾಡುವ ಸ್ನೇಹಜೀವಿ ಆರಕ್ಷಕ ಪ್ರಶಸ್ತಿಗೆ ತಾಲೂಕಿನ ಬೋರಗಿ ಗ್ರಾಮದ ಆರಕ್ಷಕ ಮೌಲಾಲಿ ಆಲಗೂರ ಆಯ್ಕೆಯಾಗಿದ್ದಾರೆ.

ಪೊಲೀಸ್ ಇಲಾಖೆಯಲ್ಲಿನ ಸಾಮಾಜಿಕ ಮತ್ತು ಸಾಹಿತ್ಯ ಸೇವೆಯನ್ನು ಪರಿಗಣಿಸಿ ಇವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಜ.21ರಂದು ಭಾನುವಾರ ನಡೆಯುವ ಸಂಕ್ರಾಂತಿ ಸಂಭ್ರಮ–2024ರ ಕಾರ್ಯಕ್ರಮದಲ್ಲಿ ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಮುನಿರಾಜು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ ಎಂದು ಸ್ನೇಹಜೀವಿ ಗೆಳೆಯರ ಬಳಗದ ಸಂಸ್ಥಾಪಕ ಅಧ್ಯಕ್ಷ ಶಶಿಕಾಂತರಾವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೋರಟಗಿ ಕಲ್ಪವೃಕ್ಷ ಪದವಿ ಕಾಲೇಜಿನಲ್ಲಿ ನಡೆದ ಸಮಾರಂಭ । ಇಸ್ರೋ ವಿಜ್ಞಾನಿ ದಂಪತಿಗೆ ಸನ್ಮಾನ । ವಿದ್ಯಾರ್ಥಿಗಳೊಂದಿಗೆ ಸಂವಾದ

# ವಿದ್ಯಾರ್ಥಿಗಳ ಗುರಿ ಧೃಡವಾಗಿರಲಿ :ವಿಜ್ಞಾನಿ ರಾಠೋಡ್

ಉದಯರಶ್ಮಿ ನ್ಯೂಸ್

ಮೋರಟಗಿ: ಮೊಟ್ಟ ಮೊದಲು ವಿದ್ಯಾರ್ಥಿಗಳ ಗುರಿ ಗಟ್ಟಿಯಾಗಿರಬೇಕು ಮನಸ್ಸಿಟ್ಟು ಪುಸ್ತಕ ಓದಿದರೆ ಯಶಸ್ಸು ನಿಮ್ಮನ್ನು ಹುಡುಕಿಕೊಂಡು ಬರುತ್ತದೆ, ಪುಸ್ತಕವನ್ನು ತಲೆಬಾಗಿ ಓದಿದರೆ ಮುಂದೊಂದು ದಿನ ಪುಸ್ತಕ ನಿಮ್ಮನ್ನು ತಲೆ ಎತ್ತಿ ತಿರುಗಾಡುವಂತೆ ಮಾಡುತ್ತದೆ. ವಿದ್ಯಾರ್ಥಿ ಜೀವನ ಬಂಗಾರವಿದ್ದಂತೆ ಕಳೆದುಕೊಳ್ಳಬೇಡಿ ಎಂದು ಚಂದ್ರಯಾನ ರೂವಾರಿ ಇಸ್ರೋ ವಿಜ್ಞಾನಿ ಯೋಜನಾ ನಿರ್ದೇಶಕ ವಿಲಾಸ ರಾಠೋಡ್ ಹೇಳಿದರು.

ಸ್ಥಳೀಯ ಕಲ್ಪವೃಕ್ಷ ಪದವಿ ಕಾಲೇಜಿನಲ್ಲಿ ಶನಿವಾರ ಹಮ್ಮಿಕೊಂಡ ಸನ್ಮಾನ ಸಮಾರಂಭ ಹಾಗೂ ಇಸ್ರೋ





ವಿಜ್ಞಾನಿ ಜೊತೆ ವಿದ್ಯಾರ್ಥಿಗಳ ಸಂವಾದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಮೊದಲು ಮೂಢನಂಬಿಕೆಯಿಂದ ಹೊರಬನ್ನಿ. ದೇವರು ಎಂದರೆ ಒಂದು ಭಯ ಇರಲಿ, ದೇವರ ಕೃಪಾಶೀರ್ವಾದದಿಂದ ಉತ್ತೀರ್ಣ ಆಗುತ್ತೀರಿ ಎನ್ನುವ ಭರವಸೆಯಲ್ಲಿ ಕೂಡಬೇಡಿ. ಶಿಕ್ಷಕರು ಹೇಳಿದ ಮಾರ್ಗದಲ್ಲಿ ನಡೆದು ಕಷ್ಟಪಟ್ಟು ಓದಿದರೆ ಮಾತ್ರ ನೀವು ಕಂಡ ಕನಸು ಖಂಡಿತ ಈಡೇರುತ್ತದೆ ಎಂದರು.

ನಂತರ ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕಾಂತಾ ನಾಯಕ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ಇಸ್ರೋ ವಿಜ್ಞಾನಿ ವಿಲಾಸ ರಾಠೋಡ್ ದಂಪತಿಗೆ ಕಲ್ಪವೃಕ್ಷ ಆಡಳಿತ ಮಂಡಳಿ ವತಿಯಿಂದ ವಿಶೇಷ ಸನ್ಮಾನ ಮಾಡಿದರು.

ಕಾರ್ಯದಲ್ಲಿ ಕಲ್ಪವೃಕ್ಷ ಸಂಸ್ಥೆಯ ಸಂಸ್ಥಾಪಕ ಶಿವಶರಣಗೌಡ ಬಿರಾದಾರ, ಅಧ್ಯಕ್ಷತೆ ವಹಿಸಿದ್ದರು, ಆಡಳಿತಾಧಿಕಾರಿ ಎಸ್. ಎಚ್. ದುಳಬಾ, ಎಸ್. ವ್ಹಿ. ಬಿರಾದಾರ, ಪ್ರಾಂಶುಪಾಲ ಎ. ಬಿ. ಸಿಂದಗಿ, ಸಿ. ಸಿ. ಬಿರಾದಾರ ಸೇರಿದಂತೆ ವಿದ್ಯಾರ್ಥಿಗಳು ಸಂಸ್ಥೆಯ ಆಡಳಿತ ಮಂಡಳಿ ಉಪಸ್ಥಿತರಿದ್ದರು.

## 200ಕ್ಕೂ ಹೆಚ್ಚು ಪ್ರಶ್ನೆಗಳಿಗೆ ಉತ್ತರಿಸಿದ ವಿಜ್ಞಾನಿಗಳು

ಕಾರ್ಯಕ್ರಮದ ಮದ್ಯದಲ್ಲಿ ಇಸ್ರೋ ವಿಜ್ಞಾನಿ ವಿಲಾಸ ರಾಠೋಡ್ ಹಾಗೂ ಪಿಯುಸಿ ವಿಜ್ಞಾನ ವಿದ್ಯಾರ್ಥಿಗಳ ಮದ್ಯೆ ಸಂವಾದ ಕಾರ್ಯಕ್ರಮ ಜರುಗಿತು.

ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ರಾಕೆಟ್, ಚಂದ್ರಯಾನ, ನಕ್ಷತ್ರ, ಭೂಮಿಯ ಅಂಡಾಕಾರದ ಕುರಿತು ಆಂಗ್ಲ,ಹಿಂದಿ ಹಾಗೂ ಕನ್ನಡ ಭಾಷೆಯಲ್ಲಿ 200 ಕಿಂತ ಅಧಿಕ ಪ್ರಶ್ನೆಗಳು ಕೇಳಿ ಉತ್ತರ ಪಡೆದರು.